ವಿಜಯಪುರ | ಸಂಪುಟ 02 | ಸಂಚಿಕೆ 65 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com | RNI NO: KARKAN/2023/86203 | ಭಾನುವಾರ, ಏಪ್ರಿಲ್ 28, 2024



"ಜಗತ್ತಿನಲ್ಲಿ ಸುಳ್ಳಿಗೆ ಆಸ್ಕರ್ ಪ್ರಶಸ್ತಿ ಏನಾದರೂ ಇದ್ದರೆ ಅದು ನರೇಂದ್ರ ಮೋದಿ ಅವರಿಗೆ ಸಿಗುತ್ತದೆ. ಪ್ರತಿ ನಾಗರಿಕನ ಖಾತೆಗೆ ರೂ.15 ಲಕ್ಷ ಹಣ ಹಾಕುವ ಭರವಸೆ ನೀಡಿ ಹತ್ತು ವರ್ಷಗಳೇ ಕಳೆದರೂ ಸಹ ದೇಶದ ಯಾವೊಬ್ಬರ ಖಾತೆಗೆ ಹತ್ತು ರೂ. ಸಹ ಬಂದಿಲ್ಲ."

– ಮಂಜುನಾಥ ಸುಣಗಾರ

ಕೆಪಿಸಿಸಿ ಮೀನುಗಾರರ ವಿಭಾಗದ ರಾಜ್ಯಾಧ್ಯಕ್ಷರು

ದಿವಾಳಿಯಾಗಿರುವ ಕಾಂಗ್ರೆಸ್ ಸರ್ಕಾರ । ತುಘಲಕ್ ದರ್ಬಾರ । ಮಾಜಿ ಸಿಎಂ ಯಡಿಯೂರಪ್ಪ ವಾಗ್ದಾಳಿ

# ಜಾತಿ ವಿಷಬೀಜ ಬಿತ್ತಿ ಗೆಲ್ಲುವ ಭ್ರಮೆಯಲ್ಲಿ ಕಾಂಗ್ರೆಸ್ :ಬಿಎಸ್ವೈ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಹಣ-ಹೆಂಡದ, ಅಧಿಕಾರದ ತೋಳ್ಬಲದಿಂದ ಜಾತಿಯ ವಿಷಬೀಜವನ್ನು ಬಿತ್ತಿ ಚುನಾವಣೆಯನ್ನು ಗೆಲ್ಲುತ್ತೇವೆ ಎಂಬ ಭ್ರಮೆಯಲ್ಲಿ ಕಾಂಗ್ರೆಸ್ ಪಕ್ಷದವರಿದ್ದರು. ಆದರೆ ಕಾಲ ಬದಲಾಗಿದೆ. ಜನತೆ ಜಾಗ್ರತರಾಗಿದ್ದಾರೆ. ಯಾವುದು ಸರಿ ಯಾವುದು ತಪ್ಪು ಎಂದು ತಿಳಿದುಕೊಳ್ಳುವ ಶಕ್ತಿ ಅವರಲ್ಲಿದೆ. ಹಾಗಾಗಿ ಮತ್ತೊಮ್ಮೆ ಮೋದಿಜೀ ಅವರನ್ನು ಬೆಂಬಲಿಸಲು ರಾಜ್ಯದ 28 ಕ್ಷೇತ್ರಗಳಲ್ಲಿ ಭಾಜಪಾ ಅಭ್ಯರ್ಥಿಗಳಿಗೆ ಮತ ನೀಡಲಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರು ಹೇಳಿದರು.

ಪಟ್ಟಣದ ಬನಶಂಕರಿ ದೇವಸ್ಥಾನದ ಆವರಣದಲ್ಲಿ ಚುನಾವಣಾ ಪ್ರಚಾರಾರ್ಥವಾಗಿ ಹಮ್ಮಿಕೊಳ್ಳಲಾಗಿದ್ದ ಬಹಿರಂಗ ಸಭೆಯಲ್ಲಿ ಅವರು ಮಾತನಾಡಿದರು.

ಕಾಂಗ್ರೆಸ್ ಸರ್ಕಾರ ದಿವಾಳಿಯಾಗಿದೆ. ಪಾಪರ ಆಗಿದೆ. ಸಂಪೂರ್ಣ ತುಘಲಕ್ ದರ್ಬಾರ ನಡೆಸುತ್ತಿದ್ದಾರೆ. ಕಳೆದ ವಿಧಾನಸಭಾ ಚುನಾವಣೆ ನಂತರ ಕಣ್ಣಿಗೆ ಕಾಣುವ ಯಾವ ಕಾಮಗಾರಿಗೂ ಚಾಲನೆ ಕೊಟ್ಟಿಲ್ಲ. ಜನ ಕೊಟ್ಟ ತೆರಿಗೆ ಹಣ ಎಲ್ಲಿ ಹೋಗಿದೆ? ರಾಜ್ಯದಲ್ಲಿ ದರೋಡೆ ನಡೀತಾ ಇದೆ. ನಮ್ಮ ಅವಧಿಯ ಪ್ರಮುಖ ಯೋಜನೆಗಳನ್ನು ನಿಲ್ಲಿಸಲಾಗಿದೆ. ಕೇವಲ ಪ್ರಚಾರದಲ್ಲಿ ತೊಡಗಿದ್ದಾರೆ ಎಂದು ಹರಿಹಾಯ್ದರು.

ಕಳೆದ ಹತ್ತು ವರ್ಷದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಎನ್.ಡಿ.ಎ ಸರ್ಕಾರ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿದೆ.



ನರೇಂದ್ರ ಮೋದಿಜೀ ಅವರು ಪ್ರಧಾನಿಯಾದಾಗಿನಿಂದ ಒಂದು ದಿನ ವಿಶ್ರಾಂತಿ ಪಡೆದಿಲ್ಲ. ದೇಶ ವಿದೇಶಗಳಿಗೆ ಹೋಗಿ ಬಂದರೂ ವಿಶ್ರಾಂತಿ ಪಡೆಯದೇ ಪಕ್ಷ ಕಟ್ಟುವ ಕೆಲಸ ಮಾಡುತ್ತಿದ್ದಾರೆ. ಈ ಬಾರಿ ಲೋಕ ಸಭೆಯಲ್ಲಿ 400ಕ್ಕೂ ಅಧಿಕ ಸೀಟುಗಳನ್ನು ಗೆಲ್ಲುವ ಮೂಲಕ ಮತ್ತೊಮ್ಮೆ ಪ್ರಧಾನಿಯಾಗುವ ವಿಶ್ವಾಸ ಇದೆ ಎಂದರು.

ಭಾಜಪಾ ಜಿಲ್ಲಾಧ್ಯಕ್ಷ ಆರ್.ಎಸ್.ಪಾಟೀಲ ಕೂಚಬಾಳ ಮಾತನಾಡಿ, ಮೋದೀಜಿ ಅವರು ಪ್ರಧಾನಿಯಾದ ನಂತರ ಕೇವಲ ಹತ್ತು ವರ್ಷದಲ್ಲಿ ಜಗತ್ತಿನಲ್ಲಿ 12 ನೇ ಸ್ಥಾನದಲ್ಲಿರುವ ಭಾರತವನ್ನು 5 ನೇ ಆರ್ಥಿಕ ಶಕ್ತಿಯನ್ನಾಗಿ ಮಾಡಿದ್ದಾರೆ. ಈ ಬಾರಿಯೂ ನಿಮ್ಮೆಲ್ಲರ ಆಶೀರ್ವಾದದಿಂದ ಗೆದ್ದು ಇಡೀ ಪ್ರಪಂಪಕ್ಕೆ ವಿಶ್ವ ಗುರು ಭಾರತವನ್ನಾಗಿ ಮಾಡಬೇಕು ಎಂಬ ಸಂಕಲ್ಪವನ್ನಿಟ್ಟುಕೊಂಡಿದ್ದಾರೆ ಎಂದರು.

ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿ ಮಾತನಾಡಿ, ಕಳೆದ 25 ವರ್ಷದ ಕಾಂಗ್ರೆಸ್ ಅವಧಿಯಲ್ಲಿ ಒಂದಿಂಚೂ ಸಿಸಿ ರಸ್ತೆಗಳಾಗಿರಲಿಲ್ಲ. ಈ ಭಾಗದ ಪ್ರಮುಖ ಪಟ್ಟಣಗಳಲ್ಲಿ ಹಳ್ಳಿಗಳಲ್ಲಿ ಈ ಮೊದಲು ಬರೀ ಧೂಳು ತುಂಬಿತ್ತು. ಕಾಲಿಟ್ಟರೆ ಬರೀ ಧೂಳಲ್ಲೇ ಓಡಾಡಬೇಕಿತ್ತು. ಜನತೆ ಅಸ್ತಮಾದಂತಹ ರೋಗಗಳಿಗೆ ತುತ್ತಾಗಿದ್ದರು. 30 ವರ್ಷಗಳಿಂದ ಆಗದೇ ಇರುವ ಕೆಲಸಗಳನ್ನು ನಮ್ಮ ಸರ್ಕಾರ ಮಾಡಿದೆ. ಸಧ್ಯ ಲೋಕಸಭಾ ಚುನಾವಣೆ ಮುಗಿದ ನಂತರ ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಎರಡು ಭಾಗಗಳಾಗಿ ವಿಂಗಡಣೆಗೊಂಡು ಸರಕಾರ ಪತನವಾಗಲಿದೆ ಎಂದರು.

ಈ ವೇಳೆ ಮಾಜಿ ಶಾಸಕರಾದ ರಮೇಶ ಭೂಸನೂರ, ಸೋಮನಗೌಡ ಪಾಟೀಲ, ಅಪ್ಪು ಪಟ್ಟಣಶೆಟ್ಟಿ, ಮಾಜಿ ಎಂಎಲ್‌ಸಿ ಅರುಣ ಶಹಾಪೂರ, ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ, ಜಗದೀಶ ಪಂಪಣ್ಣವರ, ವಿಜುಗೌಡ ಪಾಟೀಲ, ಮಲಕೇಂದ್ರಗೌಡ ಪಾಟೀಲ, ಎಂ.ಎಸ್ ಪಾಟೀಲ, ಸುರೇಶ ಬಿರಾದಾರ, ಸಿದ್ದರಾಜ ಹೊಳಿ, ಡಾ.ವಿರೇಶ ಪಾಟೀಲ ಸೇರಿದಂತೆ ಮತ್ತೀತರರು ಇದ್ದರು.


> ಅಯೋಧ್ಯೆಯಲ್ಲಿ ಶ್ರೀರಾಮ ಮಂದಿರಕ್ಕೆ ಆವ್ಹಾನ ಕೊಟ್ರೆ ಕಾಂಗ್ರೇಸ್ ನ ಯಾರೊಬ್ಬರೂ ಬಂದಿಲ್ಲ. ರಾಮನ ಮೂರ್ತಿಯನ್ನು ಪ್ರಾಣ ಪ್ರತಿಷ್ಠಾಪನೆ ಮಾಡುವದು ಅವರಿಗೆ ಇಷ್ಟವಿರಲಿಲ್ಲ. ಇದು ಕಾಂಗ್ರೇಸ್ ನೀತಿ. ದೇಶದ ಜನತೆಯ ಸಮಸ್ಯೆಗೆ ಸ್ಪಂದಿಸದೇ ಅವರ ಜೀವನದ ಜೊತೆ ಚೆಲ್ಲಾಟವಾಡುತ್ತಿದ್ದಾರೆ."
>
> **– ಬಿ.ಎಸ್.ಯಡಿಯೂರಪ್ಪ,** ಮಾಜಿ ಮುಖ್ಯಮಂತ್ರಿಗಳು.

> ಕಳೆದ ವಿಧಾನಸಭಾ ಚುನಾವಣೆಯಲ್ಲಿ ನಾನು ಅಲ್ಪ ಮತಗಳಿಂದ ಸೋತಿದ್ದು ಇದು ನನ್ನ ಸೋಲಲ್ಲ. ತಾಲೂಕಿನ ಅಭಿವೃದ್ಧಿಯ ಸೋಲು. ಸಧ್ಯ ಚುನಾವಣೆಯಲ್ಲಿ ಗೆದ್ದಿರುವವರು ಕನಿಷ್ಠ ಪಕ್ಷ ಧನ್ಯವಾದ ತಿಳಿಸೋಕೂ ನಿಮ್ಮೂರಿಗೆ ಬಂದಿಲ್ಲ."
>
> **–ಎ.ಎಸ್.ಪಾಟೀಲ ನಡಹಳ್ಳಿ,** ಮಾಜಿ ಶಾಸಕರು

## ರಾಜ ನುಡಿ

ಜೀವನದಲ್ಲಿ ದುಬಾರಿ ಪಾಠಗಳನ್ನು ಅಗ್ಗದ ಜನರಿಂದಲೇ ಕಲಿಯುತ್ತೇವೆ. ಅಗ್ಗದ ಯೋಚನೆ ಹೊಂದಿದ ಜನರ ಮಾತಿಗೆ ನೋವು ಮಾಡಿಕೊಳ್ಳುವ ಬದಲು ನಕ್ಕು ಸುಮ್ಮನಾಗಬೇಕು. ನೆಮ್ಮದಿಯ ಬದುಕಿಗಿದೊಂದು ರಹದಾರಿ..

–ಡಾ. ರಾಜಶೇಖರ ನಾಗೂರ



## ವಚನ ಚಿಂತನ 367

*ಆವಾಗಳೂ ಎನ್ನ ಮನ ಉದರಕ್ಕೆ ಹರಿವುದು.*
*ಕಾಣಲಾರೆನಯ್ಯಾ ನಿಮ್ಮುವನು, ಭೇದಿಸಲರಿಯೆ.*
*ಮಾಯದ ಸಂಸಾರದಲ್ಲಿ ಸಿಲುಕಿದೆನು.*
*ಎನ್ನದೇವ ಚೆನ್ನಮಲ್ಲಿಕಾರ್ಜುನಯ್ಯಾ,*
*ನಿಮ್ಮ ಹೊದ್ದುವಂತೆ ಮಾಡಾ, ನಿಮ್ಮ ಧರ್ಮ.*

ಅಕ್ಕಮಹಾದೇವಿಯವರು ಈ ವಚನದ ಮೂಲಕ ಜನಸಾಮಾನ್ಯರ ಮನದ ಬಯಕೆಯನ್ನು ಹೊರಹಾಕಿದ್ದಾರೆ ಮನುಷ್ಯನಾಗಿ ಹುಟ್ಟಿ ಬಂದ ಮೇಲೆ ಹೊಂದಬೇಕಾದ ಅರಿವನ್ನು ಗಳಿಸಿಕೊಳ್ಳದೆ, ಕೇವಲ ಹೊಟ್ಟೆ ಹೊರೆಯುವುದನ್ನು ಮಾತ್ರ ಚಿಂತಿಸುತ್ತ ಆ ನಿಟ್ಟಿನಲ್ಲಿ ಇಡೀ ಜೀವನವನ್ನು ಉದರಪೋಷಣೆಯಲ್ಲಿ ಕಳೆಯುವವರಂತೆ ತಮ್ಮ ನಿಲುವು ಆಗಿರುವ ಬಗ್ಗೆ ಬೇಸರ ವ್ಯಕ್ತಪಡಿಸಿ ಕೊಳ್ಳುತ್ತಾ ದೈವದ ಅರಿವನ್ನು ಹೊಂದುವಲ್ಲಿ ಸಂಸಾರ ವೆಂಬ ಮಾಯದ ಮುಸುಕು ಆವರಿಸಿದ್ದು ಅದನ್ನು ಸರಿಸಿ ನಿಮ್ಮನ್ನು ಹೊಂದುವಂತೆ ಮಾಡು ಎಂದು ಚೆನ್ನಮಲ್ಲಿಕಾರ್ಜುನನಲ್ಲಿ ಮೊರೆಯಿಟ್ಟಿದ್ದಾರೆ. ಮಹಾಲಿಂಗ (ದೇವರ)ದ ಹುಡುಕಾಟ ದಲ್ಲಿ ನಿರತರಾದ ಅಕ್ಕಮಹಾದೇವಿಯವರಿಗೆ ಕಲ್ಯಾಣದ ಶರಣರ ಸಂಪರ್ಕ ವೇರ್ಪಟ್ಟ ಮೇಲೆ ಹೊರಗೆ ಹುಡುಕುವ ಮಹಾಲಿಂಗದ ಅಂಶವೇ ಪ್ರಾಣಲಿಂಗವಾಗಿ ತನ್ನ ಅಂಗದೊಳಗೆ ಅಡಗಿದೆ ಎಂಬ ಸತ್ಯ ಅರಿವಾದಾಗ ಇತರರು ಇನ್ನೂ ಹೊರಗಡೆ ಹುಡುಕುತ್ತಾ ವ್ಯರ್ಥ ಪ್ರಯತ್ನ ಮಾಡುತ್ತಿರುವುದನ್ನು ಕಂಡು "ಹಗಲು ನಾಲ್ಕು ಜಾವ ಅಶನಕ್ಕೆ ಕುದಿವರು. ಇರುಳು ನಾಲ್ಕುಜಾವ ವ್ಯಸನಕ್ಕೆ ಕುದಿವರು. ಅಗಸ ನೀರೊಳಗಿರ್ದು ಬಾಯಾರಿ ಸತ್ತಂತೆ, ತಮ್ಮೊಳಗಿರ್ದ ಮಹಾಘನವನರಿಯರು ಚೆನ್ನಮಲ್ಲಿಕಾರ್ಜುನಾ" ಎಂದು ಮರುಗಿದ್ದಾರೆ. ಇದೇ ಭಾವದಲ್ಲಿ ಅಲ್ಲಮ ಪ್ರಭುಗಳು ಸಹ ಜನಸಾಮಾನ್ಯರ ಜೀವನ ಕ್ರಮವನ್ನು ವಿಮರ್ಶಿಸುತ್ತ "ಉದಯ ವಾಯಿತ್ತ ಕಂಡು ಉದರಕ್ಕೆ ಕುದಿವರಯ್ಯಾ, ಕತ್ತಲೆಯಾಯಿತ್ತ ಕಂಡು ಮಜ್ಜನಕ್ಕೆರೆವರಯ್ಯಾ. ಲಿಂಗಕ್ಕೆ ನೇಮವಿಲ್ಲ.ಇರುಳಿ ಗೊಂದು ನೇಮ, ಹಗಲಿಗೊಂದು ನೇಮ ? ಲಿಂಗಕ್ಕೆ ನೇಮವಿಲ್ಲ. ಕಾಯ ಒಂದು ದೆಸೆ, ಜೀವ ಒಂದು ದೆಸೆ, ಗುಹೇಶ್ವರನೆಂಬ ಲಿಂಗ ತಾನೊಂದು ದೆಸೆ." ಎನ್ನುವುದರೊಂದಿಗೆ ಮನುಷ್ಯ ಜನ್ಮದ ಸಾರ್ಥಕತೆಯು ತನ್ನ ಹೊಟ್ಟೆ ಹೊರೆಯುವುದು ಮತ್ತುಸಂತಾನದ ಬೆಳವಣಿಗೆಯಲ್ಲಿ ಮಾತ್ರ ಅಡಗಿಲ್ಲ,ತನ್ನ ಮೂಲವನ್ನು ಅರಿತುಬೆರೆ ಯುವುದಾಗಿದೆ,ಎಂದು ಎಚ್ಚರಿಸಿದ್ದಾರೆ. ಎಚ್ಚರವಾಗೋಣ ಬನ್ನಿ

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ಬರ ಪರಿಹಾರ: ಕೇಂದ್ರದ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ ಇಂದು

**ಉದಯರಶ್ಮಿ ನ್ಯೂಸ್**

ಬೆಂಗಳೂರು: ಬರ ಪರಿಹಾರ ವಿಚಾರದಲ್ಲಿ ಮಲತಾಯಿ ಧೋರಣೆ ತೋರುತ್ತಿರುವ ಕೇಂದ್ರ ಸರ್ಕಾರದ ವಿರುದ್ಧ ಕಾಂಗ್ರೆಸ್ ಮತ್ತೆ ಭಾನುವಾರ ಬೆಳಗ್ಗೆ ಪ್ರತಿಭಟನೆಗೆ ನಡೆಸಲು ನಿರ್ಧರಿಸಿದೆ.

ಕೇಂದ್ರ ಸರ್ಕಾರ ಕೇವಲ 3454 ಕೋಟಿ ರೂ. ಮಾತ್ರ ಬಿಡುಗಡೆ ಮಾಡಿದೆ.



ನಾವು ಕೇಳಿದ್ದು 18, 172 ಕೋಟಿ ರೂಪಾಯಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದ್ದಾರೆ. ಅಲ್ಲದೆ ಅತ್ಯಂತ ಕಡಿಮೆ ಬರ ಪರಿಹಾರ ಬಿಡುಗಡೆ ಮಾಡಿದ ಕೇಂದ್ರದ ನಡೆ ವಿರೋಧಿಸಿ ಭಾನುವಾರ ವಿಧಾನಸೌಧದ ಗಾಂಧಿ ಪ್ರತಿಮೆ ಮುಂದೆ ಪ್ರತಿಭಟನೆ ನಡೆಸುವುದಾಗಿ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಶನಿವಾರ ಹೇಳಿದ್ದಾರೆ.

ಶನಿವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಡಿಸಿಎಂ, ನಾಳೆ ವಿಧಾನಸೌಧದ ಗಾಂಧಿ ಪ್ರತಿಮೆ ಮುಂದೆ ಕೇಂದ್ರದ ವಿರುದ್ಧ ಪ್ರತಿಭಟನೆಗೆ ನಿರ್ಧರಿಸಲಾಗಿದೆ. ಬಹಳ ಕಡಿಮೆ ಬರ ಪರಿಹಾರ ಕೊಟ್ಟಿದ್ದಾರೆಂದು ಮಹಾತ್ಮ ಗಾಂಧಿ ಪ್ರತಿಮೆ ಎದುರು ನಮ್ಮ ಪಕ್ಷದ ನಾಯಕರು ಪ್ರತಿಭಟನೆ ಹಮ್ಮಿಕೊಂಡಿದ್ದೇವೆ. ನಾನೂ ಭಾಗವಹಿಸುತ್ತೇನೆ ಎಂದರು.

223 ತಾಲೂಕುಗಳಲ್ಲಿ ಬರವಿದೆ. 120 ವರ್ಷಗಳ ಇತಿಹಾಸದಲ್ಲಿ ಹೀಗಾಗಿರಲಿಲ್ಲ. ಬೆಂಗಳೂರಿಗೆ ನೀರಿನ ಬವಣೆ ಹೆಚ್ಚಾಗಿತ್ತು. ಆದರೂ ಬವಣೆಯಾಗದಂತೆ ನಿರ್ವಹಿಸುತ್ತಿದ್ದೇವೆ. 56.9 ಲಕ್ಷ ಹೆಕ್ಟೇರ್ ಬೆಳೆ ನಷ್ಟವಾಗಿತ್ತು. ಎನ್‌ಡಿಆರ್‌ಎಫ್ ನಾರ್ಮ್ಸ್ ಪ್ರಕಾರ ಡಿಕ್ಲೇರ್ ಮಾಡಿದ್ದೆವು. ಆಗಸ್ಟಲ್ಲೇ ಕೇಂದ್ರದ ಟೀಂ ಬಂದು ಪರಿಶೀಲಿಸಿತ್ತು. ನಾವು ಕಂಪ್ಲೀಟ್ ದಾಖಲೆ ಕೇಂದ್ರಕ್ಕೆ ಕೊಟ್ಟಿದ್ದೇವೆ. ಇಷ್ಟಾದರೂ ಬರ ಪರಿಹಾರವನ್ನು ಬಿಡುಗಡೆ ಮಾಡಿಲ್ಲ ಎಂದು ಡಿಕೆ ಶಿವಕುಮಾರ್ ಕಿಡಿಕಾರಿದರು.

## ಬರ ಪರಿಹಾರ ಮೂಲಕ ಕನ್ನಡಿಗರ ಹಿತ ಕಾಯ್ದ ಮೋದಿ :ಬಿಜೆಪಿ

**ಉದಯರಶ್ಮಿ ನ್ಯೂಸ್**


ಬೆಂಗಳೂರು: ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವ ಸಂದರ್ಭದಲ್ಲಿಯೂ ಕನ್ನಡಿಗರ ಸಂಕಷ್ಟಕ್ಕೆ ನೆರವಾಗಿರುವ ಪ್ರಧಾನಿ ಮೋದಿಯವರು ಕರ್ನಾಟಕಕ್ಕೆ ರೂ.3,454 ಕೋಟಿ ಬರ ಪರಿಹಾರ ನೀಡುವ ಮೂಲಕ ಸಮಸ್ತ ಕನ್ನಡಿಗರ ಹಿತ ಕಾಯುವ ಕೆಲಸ ಮಾಡಿದ್ದಾರೆಂದು ರಾಜ್ಯ ಬಿಜೆಪಿ ಹೇಳಿದೆ.

ಬರ ಪರಿಹಾರ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ, ರಾಜ್ಯ ಸರ್ಕಾರದ ವಿರುದ್ಧ ಕಿಡಿಕಾರಿದೆ. ಅಲ್ಲದೆ, ಪ್ರಧಾನಿ ಮೋದಿಯವರನ್ನು ಕೊಂಡಾಡಿದೆ.

ಕರ್ನಾಟಕದಲ್ಲಿ ಕಂಡು ಕೇಳರಿಯದಂತಹ ಬರ ಉಂಟಾದರೂ, ರೈತರಿಗೆ ಬಿಡಿಗಾಸು ಮಧ್ಯಂತರ ಪರಿಹಾರ ನೀಡದೆ ರಾಜ್ಯ ಕಾಂಗ್ರೆಸ್ ಸರ್ಕಾರ ಸಂಪೂರ್ಣ ಓಲೈಕೆ ರಾಜಕಾರಣದಲ್ಲಿ ನಿರತವಾಗಿತ್ತು. ಆದರೆ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವ ಸಂದರ್ಭದಲ್ಲಿಯೂ ಕನ್ನಡಿಗರ ಸಂಕಷ್ಟಕ್ಕೆ ನೆರವಾಗಿರುವ ಪ್ರಧಾನಿ ಮೋದಿಯವರು ಕರ್ನಾಟಕಕ್ಕೆ ರೂ.3,454 ಕೋಟಿ ಬರ ಪರಿಹಾರ ನೀಡುವ ಮೂಲಕ ಸಮಸ್ತ ಕನ್ನಡಿಗರ ಹಿತ ಕಾಯುವ ಕೆಲಸ ಮಾಡಿದ್ದಾರೆ. ನಾಡಿನ ಸಮಸ್ತ ಕನ್ನಡಿಗರ ಪರವಾಗಿ ಪ್ರಧಾನಿ ಮೋದಿ ಅವರಿಗೆ ತುಂಬು ಹೃದಯದ ಧನ್ಯವಾದಗಳು ಎಂದು ಹೇಳಿದೆ.

ಇದೇ ವೇಳೆ ಸುರ್ಜೇವಾಲಾ ವಿರುದ್ಧವೂ ವಾಗ್ದಾಳಿ ನಡೆಸಿ, ಕನ್ನಡಿಗರಿಗೆ ಬರ ಪರಿಹಾರ, ಅಭಿವೃದ್ಧಿಗೆ ಅನುದಾನ ಕೊಡಲು ಖಜಾನೆ ಖಾಲಿ ಮಾಡಿ, ಹಣವಿಲ್ಲ ಎಂದು ಕೂತಿರುವ ಕರ್ನಾಟಕ ಕಾಂಗ್ರೆಸ್ ಸರ್ಕಾರವು ಕಲೆಕ್ಷನ್ ಏಜೆಂಟ್ ಸುರ್ಜೇವಾಲಾ ಅವರ ಚುನಾವಣಾ ಪ್ರಚಾರಕ್ಕೆ ಸುತ್ತಾಡಲು ಸ್ಪೆಷಲ್ ಫ್ಲೈಟ್‌ಗಳ ವ್ಯವಸ್ಥೆಯನ್ನೇ ಮಾಡಿದೆ. ಎಟಿಎಂ ಸರ್ಕಾರ ಕೊಟ್ಟು ಕಳಿಸುವ ಲೂಟಿ ಹಣವನ್ನು ಚುನಾವಣೆಗಾಗಿ ದೇಶದ ತುಂಬ ತೆಗೆದುಕೊಂಡು ಹೋಗಿ ಹಂಚುವ ಜವಾಬ್ದಾರಿಯನ್ನೂ ನೀಡಲಾಗಿದೆಯೇ ಎಂದು ಪ್ರಶ್ನಿಸಿದೆ.

ಕನ್ನಡಿಗರು ಕುಡಿಯಲು ಹನಿ ನೀರಿಲ್ಲದೆ ಸತ್ತರೂ ಸಿದ್ದರಾಮಯ್ಯ ಸರ್ಕಾರಕ್ಕೆ ಚಿಂತೆ ಇಲ್ಲ. ಆದರೆ, ಹೈಕಮಾಂಡ್



ಹೇಳಿದಂತೆ ಕೇಳಿಕೊಂಡು ಕಪ್ಪ ಕಾಣಿಕೆ ಸಲ್ಲಿಸುತ್ತ, ಅವರ ಸೇವೆ ಮಾಡುತ್ತ, ಕುರ್ಚಿ ಉಳಿಸಿಕೊಳ್ಳುವುದೇ ಸಿದ್ದರಾಮಯ್ಯ ಅವರ ಗುರಿ ಎಂದು ಕಿಡಿಕಾರಿದೆ.

ಕೆಪಿಸಿಸಿ ಮೀನುಗಾರರ ವಿಭಾಗದ ರಾಜ್ಯಾಧ್ಯಕ್ಷ ಮಂಜುನಾಥ ಸುಣಗಾರ ಅಭಿಮತ

## ದೇಶದ ಆರ್ಥಿಕ ವ್ಯವಸ್ಥೆ ಹಾಳುಮಾಡಿದ ಪ್ರಧಾನಿ ಮೋದಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ರಾಜು ಅಲಗೂರ ಅವರು ಒಬ್ಬ ವಿದ್ಯಾವಂತ ಉತ್ತಮ ಅಭ್ಯರ್ಥಿಯಾಗಿದ್ದು

ಕ್ಷೇತ್ರದ ವ್ಯಾಪ್ತಿಯಲ್ಲಿರುವ ಎಲ್ಲ ಗಂಗಾಮತಸ್ಥ ಸಮುದಾಯ, ಬೆಸ್ತ ಜನಾಂಗ, ಸಾಂಪ್ರದಾಯಿಕ ಮೀನುಗಾರರು ಸೇರಿದಂತೆ ಎಲ್ಲ ವರ್ಗಗಳೂ ಅವರನ್ನು ಬೆಂಬಲಿಸಬೇಕೆಂದು ಕೆಪಿಸಿಸಿ ಮೀನುಗಾರರ ವಿಭಾಗದ ರಾಜ್ಯಾಧ್ಯಕ್ಷ ಮಂಜುನಾಥ ಸುಣಗಾರ ಕರೆ ನೀಡಿದರು.

ಶನಿವಾರ ನಗರದಲ್ಲಿ ನಡೆದ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ದೇಶದಲ್ಲಿ ಕಾಂಗ್ರೆಸ್ ಪಕ್ಷ ಸ್ವಾತಂತ್ರ್ಯ ಪೂರ್ವದಲ್ಲಿ ಹಾಗೂ ಸ್ವಾತಂತ್ರ್ಯ ನಂತರದ ಅಭಿವೃದ್ಧಿಯ ಪಥದಲ್ಲಿ ತನ್ನದೇ ಆದ ಚಾಪನ್ನು ಮೂಡಿಸುತ್ತಾ ಬಂದಿದೆ ಎಂದರು.

ಜಗತ್ತಿನಲ್ಲಿ ಸುಳ್ಳಿಗೆ ಆಸ್ಕರ್ ಪ್ರಶಸ್ತಿ ಏನಾದರೂ ಇದ್ದರೆ ಅದು ನಮ್ಮ ನರೇಂದ್ರ ಮೋದಿ ಅವರಿಗೆ ಸಿಗುತ್ತದೆ. ಯಾಕೆಂದರೆ ಪ್ರತಿಯೊಬ್ಬ ನಾಗರಿಕನ ಖಾತೆಗೆ ರೂ.15




ಲಕ್ಷ ಹಣ ಹಾಕುವ ಭರವಸೆ ನೀಡಿ ಹತ್ತು ವರ್ಷಗಳೇ ಕಳೆದರೂ ಸಹ ದೇಶದ ಯಾವೊಬ್ಬ ನಾಗರೀಕನಿಗೂ ಹತ್ತು ರೂಪಾಯಿ ಸಹ ಖಾತೆಗೆ ಬಂದಿಲ್ಲ. ವರ್ಷಕ್ಕೆ 2 ಲಕ್ಷ ಉದ್ಯೋಗ ನೀಡುವ ಭರವಸೆ ನೀಡಿ, ದೇಶದಲ್ಲಿ ಇರುವ ಅನೇಕ ಸರ್ಕಾರ ಸ್ವಾಮ್ಯದ ಸಂಸ್ಥೆಗಳ ಸಮಸ್ಯೆ ಬಗೆಹರಿಸೋ ಬದಲಾಗಿ ಅಲ್ಲಿ ಇರುವ ಉದ್ಯೋಗಿಗಳನ್ನು ಹೊರಹಾಕಿ ಸಂಸ್ಥೆಗಳನ್ನು ಖಾಸಗಿಯುವರಿಗೆ ಮಾರಾಟ ಮಾಡಿ ನಿರುದ್ಯೋಗಿಗಳನ್ನಾಗಿ ಮಾಡುವುದರ ಜೊತೆಗೆ ಅವರ ಇಡೀ ಕುಟುಂಬ ಬೀದಿಗೆ ಬರುವ ಕೆಲಸವನ್ನು ಮೋದಿಯವರು ಮಾಡಿದ್ದಾರೆ. ದೇಶದ ಆರ್ಥಿಕ ವ್ಯವಸ್ಥೆ ಹಾಳುಮಾಡಿ, ಬಡಜನರ ಖಾತೆಗಳನ್ನು ಬರಿದಾಗಿಸಿ, ಖಾಸಗಿ ಬ್ಯಾಂಕುಗಳು ಹಾಗೂ ಬಂಡವಾಳ ಶಾಹಿಗಳಿಗೆ ದೇಶವನ್ನು ದಿವಾಳಿ ಮಾಡಲು ಗುತ್ತಿಗೆ ನೀಡುತ್ತಿದ್ದಾರೆ. ಇಂತಹ ಮೋದಿಯವರಿಗೆ ದೇಶದ ಜನ ಸರಿಯಾದ ಪಾಠ ಕಲಿಸಿ, ಈ ಬಾರಿಯ ಚುನಾವಣೆಯಲ್ಲಿ ಕಾಂಗ್ರೆಸ್ ಗೆ ಬೆಂಬಲ ನೀಡಿ ಇಲ್ಲಿಯ ಅಭ್ಯರ್ಥಿ ರಾಜು ಅಲಗೂರ ಅವರನ್ನು ಗೆಲ್ಲಿಸಬೇಕೆಂದು ಮಂಜುನಾಥ ಸುಣಗಾರ ಮನವಿ ಮಾಡಿದರು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ರಾಜೇಶ ಕುಂದೂರ ಮಾತನಾಡಿ,

ಕಾಂಗ್ರೆಸ್ ಪಕ್ಷ ತನ್ನ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಿದ ಅಷ್ಟೂ ಭರವಸೆಗಳನ್ನು ಅನುಷ್ಠಾನಕ್ಕೆ ತಂದು ದೇಶವನ್ನು ಅಭಿವೃದ್ಧಿ ಮಾಡುವ ಕೆಲಸ ಮಾಡುತ್ತದೆ. ಜನತೆಯ ಅಭಿವೃದ್ಧಿಯೇ ದೇಶದ ಅಭಿವೃದ್ಧಿ ಅಂತ ನಂಬಿರುವ ಪಕ್ಷ ಕಾಂಗ್ರೆಸ್ ಪಕ್ಷ. ಹಾಗಾಗಿ ಎಲ್ಲರೂ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯನ್ನು ಗೆಲ್ಲಿಸಿ ಕೇಂದ್ರದಲ್ಲಿ ಅಧಿಕಾರಕ್ಕೆ ಬರಲು ಕಾರಣರಾಗಬೇಕು ಎಂದು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಲೋಣಿ, ಜಿಲ್ಲಾ ಮೀನುಗಾರ ವಿಭಾಗದ ಅಧ್ಯಕ್ಷ ಕೃಷ್ಣಾ ಕಾಮಟೆ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಚಾಂದಸಾಬ ಗಡಗಲಾವ, ಜಿಲ್ಲಾ ವೈದ್ಯಕೀಯ ವಿಭಾಗದ ಉಪಾಧ್ಯಕ್ಷ ಪ್ರವೀಣ ಚೌರ ಹಾಗೂ ಮಹಾದೇವಿ ಗೋಕಾಕ, ವಸಂತ ಹೊನಮೊಡೆ ಮುಂತಾದವರು ಉಪಸ್ಥಿತರಿದ್ದರು.

## ಗ್ಯಾರಂಟಿ ಹಣದಿಂದ 'ರಥ' ನಿರ್ಮಾಣಕ್ಕೆ ಮುಂದಾದ ಗೃಹಲಕ್ಷ್ಮಿಯರು

**ಉದಯರಶ್ಮಿ ನ್ಯೂಸ್**

*– ಇಲಾಹಿ ಇ. ಜಮಖಂಡಿ*

ಚಿಮ್ಮಡ: ರಾಜ್ಯ ಸರಕಾರ ಮಹಿಳೆಯರಿಗಾಗಿ ಜಾರಿಗೊಳಿಸಿರುವ ಗ್ರಹಲಕ್ಷ್ಮಿ ಯೋಜನೆಯಡಿಯಲ್ಲಿ ಪ್ರತೀ ತಿಂಗಳು ಖಾತೆಗೆ ಬರುತ್ತಿರುವ ಎರಡು ಸಾವಿರ ರೂ.ಗಳನ್ನು ಒಂದು ವರ್ಷಗಳ ಕಾಲ ಕೂಡಿಟ್ಟು ಗ್ರಾಮದ ವಿರಕ್ತಮಠಕ್ಕೆ ಅಕ್ಕಮಹಾದೇವಿಯವರ ಹೆಸರಿನಲ್ಲಿ ಬ್ರಹತ್ ರಥವನ್ನು ನಿರ್ಮಿಸಿ ಕೊಡಲು ಇಲ್ಲಿನ ಮಹಿಳೆಯರು ಮುಂದಾಗಿದ್ದಾರೆ.

ಬಾಗಲಕೋಟ ಜಿಲ್ಲೆ ರಬಕವಿ-ಬನಹಟ್ಟಿ ತಾಲೂಕಿನ ಚಿಮ್ಮಡ ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಕ್ಕ ಮಹಾದೇವಿ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಕುಲವಳ್ಳಿ ಸುಕುಮಾರ ಯೋಗಾಶ್ರಮದ ಓಂ ಗುರೂಜಿಯವರು ಗ್ರಾಮದಲ್ಲಿ ಅಕ್ಕ



ಮಹಾದೇವಿ ರಥ ನಿರ್ಮಿಸುವಂತೆ ಪ್ರಸ್ತಾಪಿಸಿದರು, ಇದಕ್ಕೆ ದನಿಗೂಡಿಸಿದ ಶೇಗುಣಶಿ ವಿರಕ್ತಮಠದ ಡಾ.ಮಹಾಂತ ಮಹಾಸ್ವಾಮಿಗಳು ಹಾಗೂ ಕೊಣ್ಣೂರ ಕಲ್ಯಾಣ ಹೊರಗಿನಮಠದ ಡಾ. ವಿಶ್ವಪ್ರಭು ಶಿವಾಚಾರ್ಯರು ಮಹಿಳೆಯರು ಮನಸ್ಸು ಮಾಡಿದರೆ ರಥ ನಿರ್ಮಾಣ ಕಷ್ಟವೇನಲ್ಲ. ಹೇಗೋ ಸರಕಾರ ಮನೆಯೊಡತಿಗೆ ಪ್ರತೀ ತಿಂಗಳು ಎರಡು ಸಾವಿರ ನೀಡುತ್ತಿದೆ. ಕೇವಲ ಒಂದು ವರ್ಷದ ಹಣ ಕೂಡಿಟ್ಟರೆ ಇಪ್ಪತ್ನಾಲ್ಕು ಸಾವಿರ ಆಗುತ್ತದೆ ಇಲ್ಲಿ ನೆರೆದಿರುವ ಮಹಿಳೆಯರಷ್ಟೆ ಮನಸ್ಸು ಮಾಡಿದರೂ ಒಂದೇ ವರ್ಷದಲ್ಲಿ ರಥ ನಿರ್ಮಾಣವಾಗುತ್ತದೆ, ಇದಕ್ಕೆ ಸಮ್ಮತಿಸಿದವರು ಕೈ ಎತ್ತುವ ಮೂಲಕ ಖಚಿತ ಪಡಿಸಬೇಕೆಂದರು. ಬಹುತೇಕ ಮಹಿಳೆಯರು ಕೈ ಎತ್ತುವ ಮೂಲಕ ಸಹಮತ ವ್ಯಕ್ತಪಡಿಸಿದರು.

ಇದರಿಂದ ಪ್ರೇರಿತರಾಗಿ ಕಾರ್ಯಕ್ರಮದಲ್ಲಿ ಸನ್ಮಾನಿತರಾಗಿ ಆಗಮಿಸಿದ್ದ ಜಮಖಂಡಿ ಸರಕಾರಿ ಪದವಿ ಮಹಾವಿದ್ಯಾಲಯದ ಹಿರಿಯ ಪ್ರಾಧ್ಯಾಪಕಿ ಡಾ.ಸುನಂದಾ ಶಿರೂರರವರು ರಥ ನಿರ್ಮಾಣಕ್ಕೆ ತಾವೂ ಒಂದು ಲಕ್ಷ ರೂ ನೀಡುವುದಾಗಿ ವಾಗ್ದಾನ ಮಾಡಿದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ ಜಮಖಂಡಿ ಓಲೆಮಠದ ಡಾ; ಚನ್ನಬಸವ ಮಹಾಸ್ವಾಮಿಗಳು ಮಹಿಳೆಯರ ಈ ಮಾದರೀ ಕಾರ್ಯವನ್ನು ಶ್ಲಾಘಿಸಿ ಹರ್ಷವ್ಯಕ್ತಪಡಿಸಿದರು.

ರಾಮದುರ್ಗ ಶಿವಮೂರ್ತೇಶ್ವರ ಮಠದ ಶಾಂತವೀರ ಮಹಾಸ್ವಾಮಿಗಳು, ಮರೇಗುದ್ದಿ ಅಡವಿಸಿದ್ದೇಶ್ವರ ಮಠದ ಗುರುಪಾದ ಮಹಾಸ್ವಾಮಿಗಳು, ಸ್ಥಳಿಯ ವಿರಕ್ತಮಠದ ಪ್ರಭು ಮಹಾಸ್ವಾಮಿಗಳು, ಜನಾರ್ಧನ ಮಹಾರಾಜರು ಉಪಸ್ಥಿತರಿದ್ದರು.

## ಹಿಟ್ಲರ್ ಶಾಹಿ ಆಡಳಿತ ಕೊನೆಗೊಳ್ಳುವ ಸಮಯ ಬಂದಿದೆ



**ಉದಯರಶ್ಮಿ ನ್ಯೂಸ್**

ವಿಜಯಪುರ: ಮೋದಿ ಈ ಸಲ ಬಹುಮತ ಪಡೆಯುವುದಿಲ್ಲ. ಅವರ ದುರಾಡಳಿತ ಕೊನೆಗಾಣಿಸಬೇಕು ಎಂದು ಹಿರಿಯ ಕಮ್ಯುನಿಸ್ಟ್ ನಾಯಕ ಅಪ್ಪಾಸಾಹೇಬ ಯರನಾಳ ಹೇಳಿದರು.

ಸಮೀಪದ ಶಿವಣಗಿ, ಹಡಗಲಿ ಹಾಗೂ ಆಹೇರಿ ಸೇರಿ ಅನೇಕ ತಾಂಡಾಗಳಲ್ಲಿ ನಡೆದ ಸಭೆಯಲ್ಲಿ ಮಾತನಾಡಿ, ಕಾಂಗ್ರೆಸ್ ಅಭ್ಯರ್ಥಿ ರಾಜು ಆಲಗೂರ ಅವರ ಪರವಾಗಿ ಮತಯಾಚಿಸಿ ಮಾತನಾಡಿದರು.

ವಿದ್ಯಾವಂತರಾದ ಆಲಗೂರರನ್ನು ಬೆಂಬಲಿಸಿದರೆ ಜಿಲ್ಲೆಗೆ ಅನುಕೂಲವಾಗಲಿದೆ. ಲೋಕಸಭೆ ಚುನಾವಣೆ ವಾತಾವರಣ ಬದಲಾಗಿದೆ. ಸುಳ್ಳು ಹೇಳಿ, ಭಾವನೆ ಕೆರಳಿಸುವ ಮೂಲಕ ಮೋದಿ ಅಧಿಕಾರ ನಡೆಸಿದ್ದಾರೆ. ಇವರ ಹಿಟ್ಲರ್ ಶಾಹಿ ಆಡಳಿತ ಕೊನೆಗೊಳಿಸಬೇಕು. ಬಡವರು, ಕೂಲಿಕಾರರಿಗೆ ಒಳ್ಳೆಯದಾಗಬೇಕು. ಮೇಲ್ವರ್ಗದ ಜನರ ಸಂಪೂರ್ಣ ಬೆಂಬಲವಿದೆ ಎಂದರು.

ಪಾಲಿಕೆ ಸದಸ್ಯ ರಾಜು ಜಾಧವ ಮಾತನಾಡಿ, ಸಂಸದ ಜಿಗಜಿಣಗಿಯವರು ಯಾವೊಂದು ಕೆಲಸ ಮಾಡಿಲ್ಲ. ಬೆಂಗಳೂರಿಗೆ ಒಂದು ಸರಿಯಾದ ರೈಲು ಮಾಡಲಿಲ್ಲ. ನಮ್ಮ ಲಂಬಾಣಿ ಸಮಾಜಕ್ಕೆ ಕನಿಷ್ಠ ಮರ್ಯಾದೆಯೂ ಕೊಡದೆ ನಮ್ಮ ಓಟೇ ಬೇಡ ಎಂದು ಹೇಳಿದ್ದಾರೆ. ಅವರಿಗೆ ಈ ಸಲ ಬುದ್ಧಿ ಕಲಿಸಬೇಕು ಎಂದರು.

ಅಭ್ಯರ್ಥಿ ಪ್ರೊ.ರಾಜು ಆಲಗೂರ ಮಾತನಾಡಿ, ಸಮುದಾಯಗಳ ಬಗ್ಗೆ ಗೌರವವಿಲ್ಲದ ಈಗಿನ ಸಂಸದರಿಂದ ಯಾವುದೇ ಉಪಯೋಗವಿಲ್ಲ. ಕಾಂಗ್ರೆಸ್‌ಗೆ ಮತ ನೀಡಿದರೆ ಅದು ವ್ಯರ್ಥವಾಗುವುದಿಲ್ಲ. ಜಿಲ್ಲೆಯ ಅಭಿವೃದ್ಧಿಗೆ ಯೋಜನೆ ಹಾಕಿಕೊಂಡಿದ್ದೇನೆ. ನಿಮ್ಮ ಸೇವಕನಾಗಿ ದುಡಿದು ವಿಶ್ವಾಸ ಉಳಿಸಿಕೊಳ್ಳುವೆ ಎಂದು ಹೇಳಿದರು.

ಖೀರು ಮಾಸ್ತರ ಅವರು ಮಾತನಾಡಿ, ತಾಂಡಾ ಅಭಿವೃದ್ಧಿಗೆ ಕಾಂಗ್ರೆಸ್ ಶ್ರಮಿಸಿದೆ. ನಮ್ಮ ಹಿತ ಯಾವತ್ತೂ ಕಾಪಾಡಿದೆ. ನಾವು ನಿಮ್ಮ ಜತೆಗಿದ್ದೇವೆ ಎಂದರು.

ರಾಜಶೇಖರ ಅವಜಿ ಪ್ರಸ್ತಾವಿಕ ಮಾತನಾಡಿ, ಈ ಸಲ ಪ್ರಜ್ಞಾವಂತಿಕೆಯಿಂದ ನಾವು ಮತಚಲಾಯಿಸುವ ಸಂದರ್ಭ ಬಂದಿದೆ. ಕಾಂಗ್ರೆಸ್ ಪಕ್ಷ ಅಭಿವೃದ್ಧಿ ಪರ ಪ್ರಣಾಳಿಕೆ ಬಿಡುಗಡೆ ಮಾಡಿದೆ. ಬಡವರ ಪರ ರಾಹುಲ್ ಗಾಂಧಿಯವರು ಮಿಡಿದಿದ್ದಾರೆ ಎಂದರು.

ಜಗನು ಮಾಸ್ತರ, ಲಾಲು ಮೊಕದ್ದಮ್, ಪ್ರಫುಲ್ ಮಂಗಣ್ಣವರ, ಯುವರಾಜ ರಾಠೋಡ, ಅರ್ಜುನ ರಾಠೋಡ, ಅನಿಲ ಭಾಗು ರಾಠೋಡ ಅನೇಕರಿದ್ದರು.

**ಬಿಎಲ್ಡಿಇ ಡೀಮ್ಡ್ ವಿವಿ ಸಮಕುಲಾಧಿಪತಿ ಡಾ. ವೈ.ಎಂ.ಜಯರಾಜ ಅಭಿಮತ**

## ಭಾರತ ಬಲಿಷ್ಠವಾಗಿರಲು ಸಮುದಾಯ ಆರೋಗ್ಯ ಪಾತ್ರ ಮುಖ್ಯ

**ಉದಯರಶ್ಮಿ ನ್ಯೂಸ್**

ವಿಜಯಪುರ: ಭಾರತ ಬಲಿಷ್ಠವಾಗಿರಬೇಕಾದರೆ ಸಮುದಾಯ ಆರೋಗ್ಯ ಪಾತ್ರ ಬಹುಮುಖ್ಯವಾಗಿದೆ ಎಂದು ಬಿ. ಎಲ್. ಡಿ. ಇ ಡೀಮ್ಡ್ ವಿಶ್ವವಿದ್ಯಾಲಯದ ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ ಹೇಳಿದ್ದಾರೆ.

ಬಿ. ಎಲ್. ಡಿ. ಇ ಸಂಸ್ಥೆಯ ಶ್ರೀ ಬಿ. ಎಂ. ಪಾಟೀಲ ನರ್ಸಿಂಗ್ ಕಾಲೇಜು, ರಾಜೀವ ಗಾಂಧಿ ವಿಶ್ವವಿದ್ಯಾಲಯ, ಬಿ. ಎಲ್. ಡಿ. ಇ ಡೀಮ್ಡ್ ವಿಶ್ವವಿದ್ಯಾಲಯ, ಸೊಸೈಟಿ ಕಮ್ಯೂನಿಟಿ ನರ್ಸಿಂಗ್ ಆಫ್ ಇಂಡಿಯಾ ಸಹಯೋಗದಲ್ಲಿ ನರ್ಸಿಂಗ್ ಕಾಲೇಜಿನಲ್ಲಿ ಶುಕ್ರವಾರ ಪ್ರಾರಂಭವಾದ ಎರಡು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವದಲ್ಲಿ ರೋಗಗಳಿಗೆ ಪರಿಣಾಮಕಾರಿ ಮತ್ತು ಕಾಳಜಿಯಿಪೂರಕ ಚಿಕಿತ್ಸೆ ಸಿಗಲಿ ಎಂಬ ಉದ್ದೇಶದಿಂದ ದೇವರ ಶುಶ್ರೂಷಕರನ್ನು ಸೃಷ್ಠಿಸಿದ್ದಾರೆ. ಸಮುದಾಯದಲ್ಲಿ ಆರೋಗ್ಯ ಸುಧಾರಣೆಯಿಂದ ದೇಶದ ಆರೋಗ್ಯ ಸುಧಾರಣೆ ಸಾಧ್ಯವಿದೆ. ದೇಶದಲ್ಲಿ ಪ್ರತಿಯೊಬ್ಬರು ದೈಹಿಕವಾಗಿ, ಮಾನಸಿಕವಾಗಿ, ಸಾಮಾಜಿಕವಾಗಿ ಸದೃಢರಾದಾಗ ಮಾತ್ರ ಭಾರತ ಬಲಿಷ್ಠವಾಗಲಿದೆ. ಇದರಲ್ಲಿ ಸಮುದಾಯ ಆರೋಗ್ಯದ ಪಾತ್ರ ಬಹುಮುಖ್ಯವಾಗಿದೆ ಎಂದು ಅವರು ಹೇಳಿದರು.

ಬೆಂಗಳೂರಿನ ರಾಜೀವ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಸೆನೆಟ್ ಸದಸ್ಯ ಡಾ.ಸೋಮಶೇಖರ ಕಲ್ಮಠ ಮಾತನಾಡಿ, ಮುಂದಿನ ದಿನಗಳಲ್ಲಿ ಎಲ್ಲ ವಿಭಾಗಗಳಲ್ಲಿ ಶುಶ್ರೂಷಕರು ಅಗತ್ಯವಾಗಲಿದ್ದಾರೆ. ಶುಶ್ರೂಷಕರು ಇಲ್ಲದೇ ಆರೋಗ್ಯ ಕ್ಷೇತ್ರ ಇರಲಾರದು. ಬಸವ ನಾಡಿನಲ್ಲಿ ಅಂತಾರಾಷ್ಟ್ರೀಯ ಸಮ್ಮೇಳನ ಆಯೋಜಿಸುವ ಮೂಲಕ ಬಿ. ಎಲ್. ಡಿ. ಇ ಸಂಸ್ಥೆ ಮಹತ್ವದ ಈ ಭಾಗದ ಆರೋಗ್ಯ ಕ್ಷೇತ್ರಕ್ಕೆ ಮಹತ್ವದ ಕೊಡುಗೆ ನೀಡಿದೆ ಎಂದು ಶ್ಲಾಘಿಸಿದರು.

ಸೊಸೈಟಿ ಕಮ್ಯುನಿಟಿ ನರ್ಸಿಂಗ್ ಆಫ್ ಇಂಡಿಯಾ ಅಧ್ಯಕ್ಷ ಡಾ. ಚೆಲರಾನಿ ವಿಜಯಕುಮಾರ ಮಾತನಾಡಿ, ಸಾಮಾನ್ಯವಾಗಿ ಅಂತಾರಾಷ್ಟ್ರೀಯ ಸಮ್ಮೇಳನಗಳು



ಮಹಾನಗರಗಳಲ್ಲಿ ನಡೆಯುತ್ತವೆ. ಈ ಬಾರಿ ಉತ್ತರ ಕರ್ನಾಟಕದ ವಿಜಯಪುರದಲ್ಲಿ ಅತ್ಯುತ್ತಮವಾಗಿ ಸಮ್ಮೇಳನ ಆಯೋಜಿಸಿರುವುದು ಹೆಮ್ಮೆಯ ಸಂಗತಿಯಾಗಿದೆ. ಮುಂಬರುವ ದಿನಗಳಲ್ಲಿ ಶುಶ್ರೂಷಕರಿಗೆ ಸಂಬಂಧಿಸಿದ ಇನ್ನಷ್ಟು ಕಾರ್ಯಕ್ರಮಗಳು ನಡೆಯಲಿ ಎಂದು ಶುಭ ಹಾರೈಸಿದರು.

ಕರ್ನಾಟಕ ಡಿಪ್ಲೊಮಾ ನರ್ಸಿಂಗ ಬೋರ್ಡ್ ಕಾರ್ಯದರ್ಶಿ ಮಡಿವಾಳಪ್ಪ ನಾಗರಳ್ಳಿ ಮಾತನಾಡಿ, ಸಮುದಾಯದಲ್ಲಿ ಶುಶ್ರೂಷಕರ ಪಾತ್ರ ಬಹುಮುಖ್ಯವಾಗಿದ್ದು, ಮುಂದಿನ ದಿನಗಳಲ್ಲಿ ಸಮುದಾಯ ಶುಶ್ರೂಷಕರಿಗೆ ಎಲ್ಲ ರೀತಿಯ ಅಧಿಕಾರ ನೀಡಿದರೆ ಆರೋಗ್ಯ ಸುಧಾರಣೆ ಮತ್ತಷ್ಟು ಉತ್ತಮವಾಗಿರಲಿದೆ ಎಂದು ಹೇಳಿದರು.

ಬಿ. ಎಲ್. ಡಿ. ಇ ಸಂಸ್ಥೆಯ ಮುಖ್ಯ ಆಡಳಿತಾಧಿಕಾರಿ ಡಾ. ಆರ್. ಬಿ. ಕೊಟ್ನಾಳ ಮಾತನಾಡಿ, ಸಂಸ್ಥೆ ವಿದ್ಯಾರ್ಥಿಗಳು ಮತ್ತು ಆರೋಗ್ಯ ಕ್ಷೇತ್ರದ ಸಿಬ್ಬಂದಿಗೆ ಕಾಲಕಾಲಕ್ಕೆ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಆಯಾ ಕ್ಷೇತ್ರಗಳ ಬದಲಾವಣೆಗಳ ಕುರಿತು ಶಿಕ್ಷಣ ಮತ್ತು ತರಬೇತಿ ನೀಡುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಕಾಲೇಜಿನ ಪ್ರಾಚಾರ್ಯ ಡಾ. ಆನಂದ ಪಾಟೀಲ, ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ರಾಜೇಶ ಹೊನ್ನುಟಗಿ, ಸೊಸೈಟಿ ಕಮ್ಯುನಿಟಿ ನರ್ಸಿಂಗ್ ಆಫ್ ಇಂಡಿಯಾ ಕಾರ್ಯದರ್ಶಿ ಡಾ. ಶಾಂಡ್ರೆಲ್ಲಾ ಇಮ್ಯಾನುಯೆಲ್ ಮಾತನಾಡಿದರು.

ಈ ಸಂದರ್ಭದಲ್ಲಿ ಗುರುರಾಜ. ಗುಗ್ಗರಿ, ಡಾ. ಜಯಶ್ರೀ ಪೂಜಾರಿ, ಡಾ. ಬಶೀರಅಹ್ಮದ, ಡಾ. ಕವಿತಾ, ಸೌಜನ್ಯಾ ಪೂಜಾರಿ, ಅಮರನಾಥ ಸನ್ಮುಕೆ, ಬಾಪು ಖೊದ್ನಾಪೂರ, ಪ್ರವೀಣ ಬಗಲಿ ಮುಂತಾದವರು ಉಪಸ್ಥಿತರಿದ್ದರು.

ನರ್ಸಿಂಗ್ ಕಾಲೇಜಿನ ಉಪಪ್ರಾಚಾರ್ಯೆ ಉಪಪ್ರಾಚಾರ್ಯೆ ಡಾ. ಸುಚಿತ್ರಾ ರಾಠಿ ಸ್ವಾಗತಿಸಿದರು. ಪ್ರಾಚಾರ್ಯ ಡಾ. ಶಾಲ್ಮೊನ ಚೊಪಡೆ ಪರಿಚಯಿಸಿದರು.

ಈ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ 800ಕ್ಕಿಂತ ಹೆಚ್ಚು ಪ್ರತಿನಿಧಿಗಳು ಪಾಲ್ಗೊಂಡಿದ್ದರು.

## ಪಕ್ಷಿಗಳಿಗೆ ನೀರುಣಿಸುವ ನಾಗಠಾಣದ ಮಕ್ಕಳು

**ಉದಯರಶ್ಮಿ ನ್ಯೂಸ್**



ವಿಜಯಪುರ: ಬೇಸಿಗೆಯ ಈ ಸಂದರ್ಭದಲ್ಲಿ ನೀರು ಆಹಾರ ಇಲ್ಲದೆ ನರಳುತ್ತಿದ್ದ ಪ್ರಾಣಿ ಪಕ್ಷಿಗಳಿಗೆ ಮಾನವೀಯ ದೃಷ್ಟಿಯಿಂದ ವಿಜಯಪುರ ತಾಲೂಕಿನ ನಾಗಠಾಣ ಗ್ರಾಮದ ಮಕ್ಕಳಾದ ಮಲ್ಲಿಕಾರ್ಜುನ ಕತ್ನಳ್ಳಿ, ಅನುಶ್ರೀ-ಶ್ರೀನಿಧಿ ಬಂಡೆ, ಅನಿತಾ ಸಮಗೊಂಡ, ಮಲ್ಲು ಗೋರನಾಳ, ರಾಕೇಶ, ರವಿ,

ಸೃಷ್ಟಿ ಸಮಗೊಂಡ, ಶಬರೀಶ ಸಮಗೊಂಡ ಅವರು ನೀರು ಮತ್ತು ಆಹಾರ ನೀಡಿ ಮಾನವೀಯತೆ ಮೆರೆಯುತ್ತಿದ್ದಾರೆ.

ಬೇಸಿಗೆಯಲ್ಲಿ ಜನರೇ ನೀರಿಗಾಗಿ ಪರದಾಡುತ್ತಾರೆ. ಅದರಲ್ಲೂ ಪ್ರಾಣಿ ಪಕ್ಷಿಗಳ ಸ್ಥಿತಿ ಹೇಳತೀರದು. ಎಲ್ಲರೂ ಪಕ್ಷಿಗಳ ರಕ್ಷಣೆಗೆ ಮುಂದಾಗಬೇಕೆಂದು ಮಕ್ಕಳು ಮನವಿ ಮಾಡಿದರು.

'ಬೇಸಿಗೆ ಬಂದಿದೆ. ಪಕ್ಷಿಗಳು ಬಾಯಾರುತ್ತಿವೆ. ನಿಮ್ಮನೆ ಸುತ್ತಮುತ್ತ, ಟೆರೇಸಿನ ಮೇಲೆ ತೆರೆದ ಮಡಿಕೆ, ಹೂಜಿಯಲ್ಲಿ ನೀರಿಡಿ. ಪ್ರಾಣಿ, ಪಕ್ಷಿಗಳ ದಾಹ ನೀಗಿಸಿ'-ಎಂಬ ಸಂದೇಶಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸಂದರ್ಭದಲ್ಲಿ ವ್ಯರ್ಥವಾಗಿ ಉಳಿದಿದ್ದ ಮಿನರಲ್ ವಾಟರ್ ಪ್ಲಾಸ್ಟಿಕ್ ಬಾಟಲುಗಳಿಂದ ನಾಗಠಾಣದ

ಮಕ್ಕಳು ಸ್ವತಃ ಈ ಪರಿಕರಗಳನ್ನು ತಯಾರಿಸಿ, ಗಿಡಗಳಿಗೆ ತೂಗು ಹಾಕಿದ್ದು, ವಿಶೇಷವಾಗಿತ್ತು.

ಗ್ರಾಮದ ಕರ್ನಾಟಕ ಪಬ್ಲಿಕ್ ಪ್ರಾಥಮಿಕ ಶಾಲಾ ಆವರಣದಲ್ಲಿ ಇರುವ ಗಿಡಮರಗಳಲ್ಲಿ ಪಕ್ಷಿಗಳಿಗೆ ನೀರಿನ ವ್ಯವಸ್ಥೆ ಮಾಡಿ, ಪ್ರತಿದಿನ ಸಂಜೆಯ ಸಮಯದಲ್ಲಿ ತೂಗು ಹಾಕಿದ ಪ್ರತಿ ಬಾಟಲುಗಳಿಗೆ ನೀರನ್ನು ತುಂಬಿಸಿ ಇಡುವ ರೂಢಿಯನ್ನು ಶಿಕ್ಷಕ ಸಂತೋಷ ಬಂಡೆ ಅವರ ಮಾರ್ಗದರ್ಶನದಲ್ಲಿ ಬೆಳೆಸಿಕೊಂಡಿದ್ದಾರೆ.

ಈ ಪರಿಸರವನ್ನು ಹಚ್ಚ ಹಸಿರಿನಿಂದ ಶೋಭಿಸುವಂತೆ ಮಾಡುವುದು ಎಲ್ಲರ ಕರ್ತವ್ಯವಾಗಿದೆ. 'ಎಲ್ಲರೂ ಪೀಳಿಗೆಯಿಂದ ಪೀಳಿಗೆಗೆ ಪರಿಸರ ಪ್ರೇಮತ್ವವನ್ನು ಮುಂದುವರೆಸಿಕೊಂಡು ಹೋಗಬೇಕು'ಎಂದು ಶಿಕ್ಷಕ ಸಂತೋಷ ಬಂಡೆ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

## ಚಿಮ್ಮಡದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ

**ಉದಯರಶ್ಮಿ ನ್ಯೂಸ್**



ಚಿಮ್ಮಡ: ಗ್ರಾಮದಲ್ಲಿ ಸಾರ್ವತ್ರಿಕ ಚುನಾವಣೆ ಪ್ರಯುಕ್ತ ಸ್ವೀಪ್ ಸಮೀತಿ ಹಾಗೂ ಸ್ಥಳೀಯ ಗ್ರಾಮ ಪಂಚಾಯತಿ ಸಹಯೋಗದೊಂದಿಗೆ ಮತದಾರರ ಜಾಗ್ರತಿ ಅಭಿಯಾನ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಇಲ್ಲಿನ ಗ್ರಾಮ ಪಂಚಾಯತಿ ಕಛೇರಿಯಿಂದ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಪ್ರಜಾಪ್ರಭುತ್ವ ನಮ್ಮಿಂದ, ಮತದಾನ ಮಾಡೋಣ ಹೆಮ್ಮೆಯಿಂದ. ನಮ್ಮ ನಡೆ ಮತದಾನದ ಕಡೆ ಎಂಬ ಘೋಷಣೆಗಳನ್ನು ಫಲಕ ಹಾಗೂ ಧ್ವನಿವರ್ಧಕಗಳ ಮೂಲಕ ಘೋಷಣೆ ಕೂಗುತ್ತ ಮತದಾರರಲ್ಲಿ ಖಡ್ಡಾಯ ಮತ ಚಲಾವಣೆ ಮಾಡುವ ಕುರಿತು ಜಾಗ್ರತಿ ಮೂಡಿಸಲಾಯಿತು. ನಂತರ ಮಾನವ ಸರಪಳಿ ನಿರ್ಮಿಸಿ ಸಾರ್ವಜನಿಕರಿಗೆ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಶಿವಾನಂದ ಬಿರಾದರ ಅವರಿಂದ ಮತದಾರರ ಪ್ರತಿಜ್ಞಾವಿಧಿ ಭೋದಿಸಲಾಯಿತು.

ನಂತರ ಗ್ರಾಮದ ಪಿಕೆಪಿಎಸ್ ಆವರಣದಲ್ಲಿ ನಡೆಯುವ ವಾರದ ಸಂತೆಯಲ್ಲಿ ಆಗಮಿಸಿದ ವ್ಯಾಪಾರಸ್ಥರೂ ಹಾಗೂ ಗ್ರಾಮಸ್ಥರಿಗೆ ಖಡ್ಡಾಯ ಮತದಾನ ಮಾಡುವ ಕುರಿತ ಜಾಗ್ರತಿಯ ಕರಪತ್ರ ವಿತರಿಸಿ ಮನವಿ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಗ್ರಾ.ಪಂ. ಸಿಬ್ಬಂದಿ, ಅಂಗನವಾಡಿ, ಆಶಾ ಕಾರ್ಯಕರ್ತೆಯರು ಸೇರಿದಂತೆ ಹಲವಾರು ಜನ ಗ್ರಾಮಸ್ಥರು ಈ ಅಭಿಯಾನದಲ್ಲಿ ಪಾಲ್ಗೊಳ್ಳುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ದ್ವಿತೀಯ ಪಿಯುಸಿ ಪರೀಕ್ಷೆ-2 ಸುಸೂತ್ರವಾಗಿ ನಡೆಸಿ :ಎಡಿಸಿ ಮುರಗಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯಲ್ಲಿ ಒಟ್ಟು 5 ಕೇಂದ್ರಗಳಲ್ಲಿ ಏಪ್ರೀಲ್ 29 ರಿಂದ ಮೇ 16ರವರೆಗೆ ದ್ವಿತೀಯ ಪಿಯುಸಿ ಪರೀಕ್ಷೆ-2 ನಡೆಯಲಿವೆ. ಮುಕ್ತ ಹಾಗೂ ಪಾರದರ್ಶಕವಾಗಿ ಪರೀಕ್ಷೆಗಳನ್ನು ನಡೆಸಲು ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿಗಳು ಕಾರ್ಯೋನ್ಮುಖರಾಗಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಸೂಚನೆ ನೀಡಿದರು.

ಶುಕ್ರವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಭಗಣದಲ್ಲಿ ನಡೆದ ದ್ವಿತೀಯ ಪಿಯು ಪರೀಕ್ಷೆ-2ರ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪರೀಕ್ಷಾ ದಿನದಂದು ಜಿಲ್ಲಾ ಖಾಜಾನೆ ಭದ್ರತಾ ಕೊಠಡಿಯಿಂದ ಗೌಪ್ಯ ಬಂಡಲ್‌ಗಳನ್ನು ಪಡೆದು ಸಂಬಂಧಪಟ್ಟ ಪರೀಕ್ಷಾ ಕೇಂದ್ರಗಳಿಗೆ ರವಾನಿಸಲು 5 ರೂಟ್‌ಗಳನ್ನು ಮಾಡಲಾಗಿದೆ. ಇದಕ್ಕಾಗಿ ತಹಶೀಲ್ದಾರರು, ಉಪತಹಶೀಲ್ದಾರರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ವಿಜಯಪುರ



ಸರಕಾರಿ/ಅನುದಾನಿತ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರು/ಹಿರಿಯ ಉಪನ್ಯಾಸಕರನ್ನು ತ್ರಿಸದಸ್ಯ ಸಮಿತಿಯ ಸದಸ್ಯರನ್ನಾಗಿ ಜಿಲ್ಲಾಧಿಕಾರಿ ಯವರು ನೇಮಕ ಮಾಡಿದ್ದಾರೆ ಎಂದು ತಿಳಿಸಿದರು.

ಪರೀಕ್ಷಾ ಕೇಂದ್ರಗಳಲ್ಲಿ ನಿಗಧಿಪಡಿಸಿದ ಕೋಠಡಿಯಲ್ಲಿಯೇ ಗೌಪ್ಯ ಬಂಡಲ್‌ಗಳನ್ನು ಮುಖ್ಯ ಅಧೀಕ್ಷಕರು ಹಾಗೂ ಸಹ ಮುಖ್ಯ ಅಧೀಕ್ಷಕರಿಗೆ ಸಿಸಿ ಟಿವಿ ಕಣ್ಗಾವಲಿನಲ್ಲಿಯೇ ಹಸ್ತಾಂತರಿಸಬೇಕು. ಜಿಲ್ಲಾ ಖಜಾನೆಯಿಂದ ಗೌಪ್ಯ ಬಂಡಲ್‌ಗಳನು ಪಡೆದುಕೊಂಡು ಪರೀಕ್ಷಾ ಕೇಂದ್ರಗಳಿಗೆ ರವಾನೆ ಮಾಡುವ ಕಾರ್ಯದಲ್ಲಿ ಯಾವುದೇ ಲೋಪದೋಷ ಉಂಟಾಗದಂತೆ ನೋಡಿಕೋಳ್ಳಬೇಕು. ಪ್ರಶ್ನೇ ಪತ್ರಿಕೆ ಸಾಗಿಸುವ ವಾಹನಗಳಿಗೆ ಕಡ್ಡಾಯವಾಗಿ ಜಿಪಿಎಸ್ ಆಕ್ಟೀವೇಟ್ ಆಗಿರುವಂತೆ ನೋಡಿಕೋಳ್ಳಬೇಕು. ಎಲ್ಲಿಯೂ ಅನಗತ್ಯವಾಗಿ ವಾಹನ ನಿಲುಗಡೆ ಮಾಡಬಾರದು ಎಂದು ಸೂಚಿಸಿದರು.

ಪರೀಕ್ಷಾ ಕೇಂದ್ರಗಳಲ್ಲಿ ಕುಡಿಯಲು ನೀರು, ಶೌಚಾಲಯ ಇತ್ಯಾದಿ ಮೂಲಭೂತ ಸೌಕರ್ಯಗಳ ವ್ಯವಸ್ಥೆ ಕಲ್ಪಿಸಬೇಕು. ಕೊಠಡಿಗಳಲ್ಲಿ ಉತ್ತಮ ಗಾಳಿ ಬೆಳಕು ಹೊಂದಿರುವಂತೆ ನೋಡಿಕೊಳ್ಳಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಅಕ್ರಮ ಚಟುವಟಿಕೆಗೆ ಆಸ್ಪದ ನೀಡಬಾರದು. ಮುಕ್ತ ಹಾಗೂ ಪಾರದರ್ಶಕ ಪರೀಕ್ಷೆ ನಡೆಸಲು ವೆಬ್‌ಕಾಸ್ಟಿಂಗ್ ಮಾಡಲಾಗಿದೆ. ಇದಕ್ಕಾಗಿ ಇಲಾಖೆ ಸೂಚಿಸಿರುವ ನಿಯಮಗಳನ್ನು ಎಲ್ಲರೂ ಕಡ್ಡಾಯವಾಗಿ ಪಾಲಿಸಬೇಕು ಎಂದರು.

ಪರೀಕ್ಷೆಗಳು ನಡೆಯುವ ದಿನಗಳಂದು ಪರೀಕ್ಷಾ ಕೇಂದ್ರದ 200 ಮೀ ಸುತ್ತಲೂ 144 ಕಲಂ ಜಾರಿಯಲ್ಲಿರುತ್ತದೆ. ಕೇಂದ್ರದ ಸುತ್ತಮುತ್ತ ವ್ಯಾಪ್ತಿಯಲ್ಲಿರುವ ಜೆರಾಕ್ಸ್ ಸೆಂಟರ್, ಕಂಪ್ಯೂಟರ್ ಸೆಂಟರ್‌ಗಳನ್ನು ಮುಚ್ಚಿಸಬೇಕು. ಪರೀಕ್ಷಾ ಕೇಂದ್ರಗಳಲಿ ಮೊಬೈಲ್ ಬಳಸುವುದು ನಿಷೇಧಿಸಲಾಗಿದೆ ಎಂದು ಹೇಳಿದರು.

ಪೂರ್ವಭಾವಿ ಸಭೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸಿ.ಕೆ. ಹೊಸಮನಿ, ವಿವಿಧ ತಾಲೂಕಿನ ಬಿಇಒ, ಪ್ರಾಚಾರ್ಯರು, ಉಪನ್ಯಾಸಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಮನೆಯಿಂದಲೇ ಮತದಾನ: ಹಿಗ್ಗಿದ ಹಿರಿಯ ನಾಗರಿಕರು & ವಿಶೇಷ ಚೇತನರು

**ಉದಯರಶ್ಮಿ ನ್ಯೂಸ್**



ವಿಜಯಪುರ: ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ಕ್ಕೆ ಸಂಬಂಧಿಸಿದಂತೆ ಚುನಾವಣಾ ಆಯೋಗವು 85 ವರ್ಷ ಮೇಲ್ಪಟ್ಟವರು ಮತ್ತು ವಿಕಲಚೇತನರಿಗೆ ಮನೆಯಿಂದಲೇ ಮತದಾನ ಮಾಡಲು ನೀಡಿರುವ ವಿಶೇಷ ಸೌಲಭ್ಯ ಬಳಸಿಕೊಂಡು ಜಿಲ್ಲೆಯ ಹಿರಿಯ ನಾಗರೀಕರು ಮತ್ತು ವಿಶೇಷ ಚೇತನರು ತಮ್ಮ ಹಕ್ಕು ಚಲಾಯಿಸಿ ಹಿರಿ ಹಿರಿ ಹಿಗ್ಗಿದರು.

ಜಿಲ್ಲೆಯ ಲೋಕಸಭಾ ವ್ಯಾಪ್ತಿಯಲ್ಲಿ ಏಪ್ರಿಲ್ 27 ರಂದು ಮನೆಯಿಂದ ಮತದಾನ ಮಾಡಲು ಒಪ್ಪಿಗೆ ಪತ್ರ ನೀಡಿರುವ 85 ವರ್ಷ ಮೇಲ್ಪಟ್ಟ ಹಾಗೂ ವಿಕಲಚೇತನ ಮತದಾರರ ಮನೆಗಳಿಗೆ ವೇಳಾಪಟ್ಟಿ ಮತ್ತು ರೂಟ್ ಮ್ಯಾಪ್ ಸಿದ್ದಪಡಿಸಿಕೊಂಡಿರುವ ಮತಗಟ್ಟೆ ಸಿಬ್ಬಂದಿ ತೆರಳಿ ಮತದಾನ ಪ್ರಕ್ರಿಯೆಗಳನ್ನು ನಡೆಸಿದರು.

ಮುದ್ದೇಬಿಹಾಳ ಮತಕ್ಷೇತ್ರ ವ್ಯಾಪ್ತಿಯ ಕುಂಟೋಜಿ ಗ್ರಾಮದ 77 ವರ್ಷದ ವಿಶೇಷ ಚೇತನರಾದ ಮಹಾದೇವಿ ಹಿರೇಮಠ ಅವರು, ಅಧಿಕಾರಿಗಳು ತಿಳಿಸಿದ ಮಾದರಿಯಲ್ಲಿಯೇ ಮತಪತ್ರವನ್ನು ಬಿಡಿಸಿ, ಮತ ಹಾಕಿ, ಸಂಬಂಧಪಟ್ಟ ಲಕೋಟೆಯಲ್ಲಿಯೇ ಮತಪತ್ರವನ್ನು ಹಾಕಿದರು. ನಂತರ ಮಾತನಾಡಿದ ಅವರು, ಕಾಲು ಮುರಿದ ಕಾರಣ ನಡೆಯಲು ಸಾಧ್ಯವಿಲ್ಲವಾಗಿದ್ದು ಮನೆ ಬಳಿಗೆ ನನ್ನ ಬಂದು ನನ್ನ ಮತ ಪಡೆದದ್ದು 'ಬಾಳಾ ಛಲೋ ಆತ್ರಿ' ಎಂದು, ಹೆಮ್ಮೆಯಿಂದ ಮತದಾನ ಮಾಡಿದ ತಮ್ಮ ಬೆರಳ ಗುರುತನ್ನು ತೋರಿಸಿ ಸಂಭ್ರಮಿಸಿದರು.

ಬಬಲೇಶ್ವರ ತಾಲೂಕಿನ ದದಾಮಟ್ಟಿಯ ಗ್ರಾಮದ 90 ವರ್ಷದ ವಯೋವೃದ್ಧೆ ಯಲ್ಲವ್ವ ಮಾದರ, ತನಗೆ ಅನಾರೋಗ್ಯವಿದ್ದರೂ ಕುಶಿಯಿಂದ ಮತದಾನ ಮಾಡಿ, ಮನೆಯಿಂದ ಮತದಾನ ಮಾಡಿದ್ದು ಛಲೋ ಆತ್ರಿ.. ಮೊದಲು ನಮ್ಮನ್ನು ವೋಟ್ ಮಾಟೋಕೆ ಎಳಕೊಂಡು ಹೋಗ್ತಾ ಇದ್ರು, ಇವಾಗ ಕುಳಿತಲ್ಲಿಯೇ ಅಧಿಕಾರಿಗಳು ಬಂದು ಮತ ಹಾಕಿಸಿಕೊಳ್ಳಲು ಪವರ್ ಕೊಟ್ಟಿದ್ದು ಕುಶಿ ಆಗಿದೆ ಎಂದು, ತಮ್ಮ ಬೆರಳಿನ ಶಾಹಿಯನ್ನು ತೋರಿಸಿ ನಕ್ಕರು.

ಮನೆಯಿಂದ ಮತದಾನ ಮಾಡುವ ಅರ್ಹ ಮತದಾರರಿಗೆ, ಮುಂಚಿತವಾಗಿಯೇ ಸೇರಿದಂತೆ ಮತಗಟ್ಟೆ ಅಧಿಕಾರಿಗಳು ಇಂದು ಅವರ ಮನೆಗಳಿಗೆ ಭೇಟಿ ನೀಡುವ ಸಮಯ ಮತ್ತು ದಿನಾಂಕವನ್ನು ಬಿಎಲ್‌ಒಗಳ ಮುಖಾಂತರ ತಿಳಿಸಿದ್ದು, ತಾವು ಬರುವ ಸಮಯದಲ್ಲಿ ಮತದಾನಕ್ಕೆ ಸಂಬಂಧಿಸಿದ ದಾಖಲೆಗಳನ್ನು ಇಟ್ಟುಕೊಳ್ಳುವಂತೆ ತಿಳಿಸಿದ್ದರಿಂದ ಯಾವುದೇ ಗೊಂದಲಗಳಿಗೆ ಆಸ್ಪದವಾಗದೇ ಮತದಾನ ಪ್ರಕ್ರಿಯೆ ನಡೆಯಿತು.

ಮನೆಯಿಂದ ಮತದಾನ ಮಾಡುವ ಮತಗಟ್ಟೆ ಸಿಬ್ಬಂದಿಗಳ ತಂಡದಲ್ಲಿ ಸೆಕ್ಟರ್ ಅಧಿಕಾರಿ, ಪೋಲಿಂಗ್ ಅಧಿಕಾರಿಗಳು , ಮೈಕ್ರೋ ಆಬ್ಸರ್ವರ್, ಬಿ.ಎಲ್.ಒ, ಪೊಲೀಸ್ ಸಿಬ್ಬಂದಿ, ವಿಡಿಯೋಗ್ರಾಫರ್ ಗಳಿದ್ದು, ತಮಗೆ ನಿಯೋಜಿಸಿದ್ದ ಪ್ರತ್ಯೇಕ ವಾಹನದಲ್ಲಿಯೇ, ಮತದಾನ ಪ್ರಕ್ರಿಯೆಗೆ ಅಗತ್ಯವಿದ್ದ ಎಲ್ಲಾ ಪರಿಕರಗಳೊಂದಿಗೆ ನಿಯೋಜಿತ ಮನೆಗಳಿಗೆ ಭೇಟಿ ನೀಡಿದರು.

ಮನೆಯಿಂದ ಮತದಾನ ಮಾಡುವ ಕಾರ್ಯವಿಧಾನದ ಬಗ್ಗೆ ಮತದಾರ ಕುಟುಂಬದವರಿಗೆ ವಿವರಿಸಿ, ಮತದಾರನ ಮೇಲೆ ಯಾರೊಬ್ಬರೂ ಪ್ರಭಾವ ಬೀರದಂತೆ, ಮತದಾನ ಮಾಡುವ ಸಂದರ್ಭದಲ್ಲಿ ಕುಟುಂಬ ಸದಸ್ಯರನ್ನು ಮತದಾನ ಮಾಡುವ ಕೊಠಡಿಯಿಂದ ಹೊರಗೆ ನಿಲ್ಲಿಸಿ, ಗೋಪ್ಯತೆ ಕಾಪಾಡುವ ಮೂಲಕ ಮತದಾನ ಪ್ರಕ್ರಿಯೆ ನಡೆಸಲಾಯಿತು.

ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಆಗಿರುವ ಟಿ.ಭೂಬಾಲನ್ ಅವರು ಏ.27ರಿಂದ 29ರವರೆಗೆ ಮೂರು ದಿನಗಳ ಕಾಲ ನಡೆಯುವ 85 ವರ್ಷ ಮೇಲ್ಪಟ್ಟವರು ಮತ್ತು ವಿಕಲಚೇತನರಿಗೆ ಮನೆಯಿಂದಲೇ ಮತದಾನ ಮಾಡುವ ಪ್ರಕ್ರಿಯೆಯನ್ನು ವೀಕ್ಷಿಸಲು ನಾಗಠಾಣ ವಿಧಾನಸಭಾ ಮತಕ್ಷೇತ್ರದ ಹೊನ್ನುಟಗಿ ಗ್ರಾಮಕ್ಕೆ ತೆರಳಿ ಕಾರ್ಯವೈಖರಿಯನ್ನು ಪರಿಶೀಲಿಸಿದರು.

**85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು, ವಿಶೇಷ ಚೇತನರಿಗೆ ಮತದಾನ ಜಾಗೃತಿ**

## ಹಿರಿಯ ನಾಗರಿಕರ ಮನೆ ಬಾಗಿಲಿಗೆ ಮತದಾನ ತಂಡ: ಮುಂಡರಗಿ

**ಉದಯರಶ್ಮಿ ನ್ಯೂಸ್**



ವಿಜಯಪುರ: 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಚುನಾವಣಾ ಆಯೋಗವು ಮನೆಯಲ್ಲಿಯೇ ಕುಳಿತು ಮತದಾನ ಮಾಡಲು ಮಹತ್ತರ ಅವಕಾಶವನ್ನು ಕಲ್ಪಿಸಿದೆ. ಆದ್ದರಿಂದ ತಾವುಗಳು ಯಾವುದೇ ತೊಂದರೆಗೊಳಗಾಗದೇ ಮನೆಯಲ್ಲಿಯೇ ಇದ್ದು ಮತದಾನ ಮಾಡಬಹುದು ಎಂದು ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿ ಸಿ. ಆರ್. ಮುಂಡರಗಿ ಹೇಳಿದರು.

ಅವರು ಜಿಲ್ಲಾ ಸ್ವೀಪ್ ಸಮಿತಿ ವಿಜಯಪುರ ವತಿಯಿಂದ ಶುಕ್ರವಾರ ವಿಜಯಪುರ ನಗರದ ಗ್ಯಾಂಗ್ ಬಾವಡಿ ಹಾಗೂ ಎಪಿಎಂಸಿ ಹತ್ತಿರ ಅಕ್ಕಮಹಾದೇವಿ ರೋಡ್ ವ್ಯಾಪ್ತಿಗಳಲ್ಲಿ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಮನೆಯಲ್ಲಿಯೇ ಮತದಾನ ಮಾಡುವಂತೆ ಮನವಿ ಮಾಡಿ, ಮನೆಗಳ ಗೋಡೆಗಳ ಮೇಲೆ ಪೋಸ್ಟರ್ ಗಳನ್ನು ಅಂಟಿಸುವ ಮೂಲಕ ಮತದಾನ ಕುರಿತು ಜಾಗೃತಿ ಅಭಿಯಾನದಲ್ಲಿ ಮಾತನಾಡಿದರು.

85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಮತ್ತು ವಿಶೇಷ ಚೇತನರ ಮನೆಯ ಬಾಗಿಲಿಗೆ ಅಧಿಕಾರಿಗಳ ತಂಡವು ಮತದಾನ ಪ್ರಕ್ರಿಯೆ ನಡೆಸಲು ಬರಲಿದ್ದಾರೆ. ಈ ಮತದಾನ ಪ್ರಕ್ರಿಯೆಯು ಏ.27ರಿಂದ ಏ.29ರವರೆಗೆ ಮೂರು ದಿನಗಳ ಕಾಲ ನಡೆಯಲಿದೆ. ಆದ್ದರಿಂದ ಕಡ್ಡಾಯವಾಗಿ ತಪ್ಪದೇ ಮತದಾನ ಮಾಡಬೇಕು ಎಂದು ಹಿರಿಯ ನಾಗರಿಕರು ಮತ್ತು ವಿಶೇಷ ಚೇತನರಲ್ಲಿ ವಿನಂತಿಸಿದರು.

85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು, ವಿಶೇಷ ಚೇತನರಿಗೆ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಅಭಿನಂದನಾ ಪತ್ರಗಳನ್ನು ವಿತರಿಸಲಾಯಿತು ಮತ್ತು ಪ್ರತಿ ಮನೆ ಮನೆಗೂ ಮತದಾನದ ಜಾಗೃತಿ ಕುರಿತ ಪೋಸ್ಟರ್‌ಗಳನ್ನು ಅಂಟಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ರಾಜಶೇಖರ ದೈವಾಡಿ, ಜಿಲ್ಲಾ ಪಂಚಾಯತಿಯ ಯೋಜನಾ ಅಂದಾಜು ಮತ್ತು ಮೌಲ್ಯಮಾಪನಾಧಿಕಾರಿಗಳಾದ ಎ ಬಿ ಅಲ್ಲಾಪೂರ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣ ಇಲಾಖೆಯ ಹಾಗೂ ಜಿಲ್ಲಾ ಪಂಚಾಯತಿಯ ಸಿಬ್ಬಂದಿ ಉಪಸ್ಥಿತರಿದ್ದರು.

## ಗುರುವಂದನಾ ಹಾಗೂ ಸ್ನೇಹಿತರ ಸಮ್ಮಿಲನ ಇಂದು

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಬಿ.ಎಲ್.ಡಿ.ಇ ಸಂಸ್ಥೆಯ ದಿ.ಎ.ಬಿ.ಸಾಲಕ್ಕಿ ಪ್ರೌಢಶಾಲೆಯ 1990-91ನೇ ಸಾಲಿನ ವಿದ್ಯಾರ್ಥಿ, ವಿದ್ಯಾರ್ಥಿನೀಯರ ಗುರುವಂದನಾ ಹಾಗೂ ಸ್ನೇಹಿತರ ಸಮ್ಮೀಲನ ಕಾರ್ಯಕ್ರಮ ಇಂದು (ಭಾನುವಾರ) ಜರುಗಲಿದೆ.

ಪಟ್ಟಣದ ಮಲ್ಲಯ್ಯನ ದೇವಸ್ಥಾನದ ಆವರಣದಲ್ಲಿ ಬೆಳಿಗ್ಗೆ 10 ಗಂಟೆಗೆ ಆರಂಭಗೊಳ್ಳುವ ಕಾರ್ಯಕ್ರಮದಲ್ಲಿ ಬೆಂಗಳೂರು ಮಾರತಹಳ್ಳಿ ವಿಭೂತಿಪುರ ವೀರಸಿಂಹಾಸನ ಸಂಸ್ಥಾನಮಠದ ಮಹಾಂತಲಿಂಗ ಸ್ವಾಮೀಜಿ ಹಾಗೂ ಎಮ್ಮಿಗನೂರ ಹಂಪಿಸಾವಿರದೇವರಮಠದ ವಾಮದೇವ ಮಹಾಂತ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದಾರೆ.

ಅಧ್ಯಕ್ಷತೆಯನ್ನು ನಿವೃತ್ತ ಮುಖ್ಯೋಪಾಧ್ಯಾಯ ಎ.ಆರ್.ಭತಗುಣಕಿ ವಹಿಸಲಿದ್ದಾರೆ. ಉದ್ಘಾಟಕರಾಗಿ ನಿವೃತ್ತ ಪ್ರಾಚಾರ್ಯ ಎಸ್.ಬಿ.ಮಿರ್ಜಿ ಆಗಮಿಸಲಿದ್ದು, ತಹಶೀಲ್ದಾರ ಪ್ರಕಾಶ ಸಿಂದಗಿ, ಅಂಕಣಕಾರ ಮಂಜುನಾಥ ಜುನಗೊಂಡ, ಪ್ರಾಚಾರ್ಯ ವ್ಹಿ.ಎಮ್.ಪಾಟೀಲ, ಬಿ.ಜಿ.ಅರಳಿಮಟ್ಟಿ ಸೇರಿದಂತೆ ನಿವೃತ್ತ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕ, ಶಿಕ್ಷಕಿಯರ ಬಳಗ ಭಾಗವಹಿಸಲಿದೆ. ನಂತರ ದೀಪಕ ಮೆಲೊಡೀಸ್ ಇವರಿಂದ ರಸಮಂಜರಿ ಕಾರ್ಯಕ್ರಮ ಜರುಗಲಿದೆ ಎಂದು ಸ್ನೇಹಿತರ ಬಳಗದ ಪ್ರಕಟಣೆ ತಿಳಿಸಿದೆ

# ಭಾರತ ವಿಶ್ವಗುರುವಾಗಿಸುವ ಶಕ್ತಿ ಮೋದಿಯವರಿಂದ ಸಾಧ್ಯ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರ ಮತಕ್ಷೇತ್ರ ವ್ಯಾಪ್ತಿಯ ವಾರ್ಡ ನಂ.2 ರ ದರ್ಗಾ ರಸ್ತೆಯಲ್ಲಿರುವ ಪ್ರಜಾಪೀತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯಕ್ಕೆ ಕರ್ನಾಟಕ ರಾಜ್ಯ ಸಂಯುಕ್ತ ಸೌಹಾರ್ದ ಸಹಕಾರಿ ನಿ. ನಿರ್ದೇಶಕರಾದ ರಾಮನಗೌಡ ಪಾಟೀಲ ಯತ್ನಾಳ ಅವರ ನೇತೃತ್ವದಲ್ಲಿ ಭೇಟಿ ನೀಡಿದ ಬಿಜೆಪಿ ನಗರ ಮಂಡಲ ಪದಾಧಿಕಾ–ರಿಗಳು ವಿಜಯಪುರ ಲೋಕಸಭಾ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿ ಅವರ ಪರವಾಗಿ ಮತಯಾಚಿಸಿದರು.

ಈ ವೇಳೆ ಮಾತನಾಡಿದ ಅವರು, ಭಾರತ ದೇಶವನ್ನು ವಿಶ್ವಗುರು ಆಗಿ ಮಾಡುವ ಶಕ್ತಿ ಪ್ರಧಾಮಮಂತ್ರಿಗಳಾದ ಮೋದಿಯವರಿಂದ ಮಾತ್ರ ಸಾಧ್ಯ. ಹೀಗಾಗಿ ಇಡೀ ದೇಶ ಅವರನ್ನು ಬೆಂಬಲಿಸುತ್ತಿದೆ. ಅವರು ಮತ್ತೆ ಪ್ರಧಾನಿಯಾದರೆ ದೇಶ ಸುರಕ್ಷಿತವಾಗಿರುವುದಲ್ಲದೆ, ಅಭಿವೃದ್ಧಿ ಪಥದತ್ತ ದೇಶ ಸಾಗಲಿದೆ.



ಹೀಗಾಗಿ ನಾವು ನಮ್ಮ ಜಿಲ್ಲೆಯಿಂದ ರಮೇಶ ಜಿಗಜಿಣಗಿ ಅವರನ್ನು ಗೆಲ್ಲಿಸಿ ಕಳಿಸೋಣ ಎಂದರು.

ರಾಜಯೋಗಿನಿ ಬ್ರಹ್ಮಕುಮಾರಿ ಸರೋಜಾ ಅಕ್ಕ, ರಾಜ ಯೋಗಿ ಬ್ರಹ್ಮಕುಮಾರ ಗಂಗಾಧರ ಅಣ್ಣ, ಬಿಜೆಪಿ ನಗರ ಮಂಡಲದ ಅಧ್ಯಕ್ಷ ಶಂಕರ ಹೂಗಾರ ಸೇ–ರಿದಂತೆ ವಿವಿಧ ಮೋರ್ಚಾಗಳ ಪದಾಧಿಕಾರಿಗಳು, ಕಾರ್ಯಕರ್ತರು, ಅಭಿಮಾನಿಗಳು, ಹಿತೈಷಿಗಳು ಹಾಗೂ ಪ್ರಜಾಪೀತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದ ಪರಿವಾರದ ದೈವಿ ಸಹೋದರ, ಸಹೋದರಿಯರು ಇದ್ದರು.

# ಸ್ವ ಸಹಾಯ ಸಂಘದ ಹೆಸರಲ್ಲಿ ಮಹಿಳೆಯರಿಗೆ ಮೋಸದ ವದಂತಿ

**ಉದಯರಶ್ಮಿ ನ್ಯೂಸ್**

ಇಂಡಿ: ಮಹಿಳಾ ಸಂಘದವರ ವೇಷದಲ್ಲಿ ಇಬ್ಬರು ನಕಲಿ ಮ್ಯಾನೇಜರ್, ಮಹಿಳೆಯರಿಗೆ ಹಣದ ಆಮಿಷ ತೋರಿಸಿ ಲಕ್ಷಗಟ್ಲೆ ಹಣದ ಜೊತೆ ವಂಚಕರು ಫರಾ–ರಿಯಾಗಿದ್ದಾರೆ ಎಂಬ ವದಂತಿ ತಾಲೂಕಿನಾದ್ಯಂತ ಹಬ್ಬಿದೆ.

ತಾಲೂಕಿನಲ್ಲಿ ಜನ ಅಭಿವೃದ್ಧಿ ಮಹಿಳಾ ಸ್ವ ಸಹಾಯ ಸಂಘ ಎಂಬ ಹೆಸರಲ್ಲಿ ಜನರಿಗೆ ಮೋಸ ಮಾಡಲಾಗಿದೆ ಎಂದು ತಿಳಿದು ಬಂದಿದೆ.

ಸಿಂದಗಿ ರಸ್ತೆಯ ಅಶೋಕ್‌ಗೌಡ ಕಾಂಪ್ಲೆಕ್ಸನಲ್ಲಿ ಈ ನಕಲಿ ಸಂಘದ ಕಚೇರಿಯನ್ನು ಸ್ಥಾಪಿಸಲಾಗಿತ್ತು ಎಂಬ ಮಾಹಿತಿ ಇದೆ.

ಇಂಡಿ ತಾಲೂಕಿನ ಪ್ರತಿ ಹಳ್ಳಿಗಳಿಗೆ ಹೋಗಿ ಹೆಣ್ಣು ಮಕ್ಕಳ ಹತ್ತು ಜನರ ಒಂದು ಗುಂಪು ಮಾಡಿದರೆ ನಿಮಗೆ ಪ್ರತಿಯೊಬ್ಬರಿಗೂ 150000 ಲಕ್ಷ ರೂ ಹಣ ನಿಮ್ಮ ಖಾತೆಗೆ 3 ದಿನಗಳಲ್ಲಿ ಜಮಾ ಮಾಡುತ್ತೇವೆ. 150000 ರ ದಲ್ಲಿ 15000 ಸಾವಿರ ಸಬ್ಸಿಡಿ ಲೆಕ್ಕದಲ್ಲಿ ಇರುತ್ತೆ ಮುಂಗಡವಾಗಿ ಎಲ್ಲರೂ ತಲಾ 5200 ರಂತೆ ಮೊದಲಿಗೆ ಕೊಡಬೇಕು ಅಂತ ಹೇಳಿ ತಲಾ 5200 ರಂತೆ ವಂಚಿಸಿ ಜನರಿಗೆ ಮೋಸ ಮಾಡಿ ಪರಾರಿ ಆಗಿದ್ದಾರೆ

ನಿಮ್ಮ ಸಾಲದ ಪ್ರಕ್ರಿಯೆ ಮುಗಿಯಲು 8 ದಿನ ಬೇಕಾಗುತ್ತದೆ ಎಂದು ಹೇಳಿ ಕಾಲ್ ಕಟ್ ಮಾಡುತ್ತಿದ್ದರು. ಸರಿಯಾಗಿ 8 ದಿನಗಳ ನಂತರ ಮತ್ತೆ ಕಾಲ್ ಮಾಡುವ ಈ ವಂಚಕರು , ನಿಮಗೆ ಸಾಲ ಮಂಜೂರಾಗಿದೆ. 5200 ಮುಂಗಡವಾಗಿ ನೀವು ಪಾವತಿಸಬೇಕಾಗುತ್ತದೆ. ಮುಂಗಡ ಜಮೆ ಮಾಡಿದ 5200 ರೂ ಹಣ ಮೂರು ಕಂತ್ತಿನ ಸಾಲದ ಮೊತ್ತ ನೀವು ಕಟ್ಟಿದರೆ ನಿಮ್ಮಗೆ 5200 ರೂ ಹಣದಲ್ಲಿ 5000 ಸಾವಿರ ಹಣ ನಿಮ್ಮಗೆ ಮರುಪಾವತಿ ಯಾಗುತ್ತೆ ಅದರಲ್ಲಿ 200 ರೂ ಹಣ ಪ್ರೊಸೆಸಿಂಗ ಫೀ ಕಟ್ಟ ಆಗುತ್ತೆ ಅಂತ ಹೇಳಿರುತ್ತಾರೆ, ನಂತರ ಒಂದುವಾರದೊಳಗೆ ನಿಮ್ಮ ಖಾತೆಗೆ ಸಾಲದ ಹಣ ಸಂದಾಯವಾಗುತ್ತದೆ ಎನ್ನುವ ಭರವಸೆಯನ್ನೂ ನೀಡುತ್ತಿದ್ದರು. ವಾರ ಕಳೆದು ತಿಂಗಳು ಮುಗಿದರೂ ತಮ್ಮ ಖಾತೆಗೆ ಸಾಲದ ಹಣ ಬಾರದಿದ್ದಾಗ ಅವರು ವಾಪಾಸ್ ಆ ನಂಬರಿಗೆ ಕರೆ ಮಾಡಿದರೆ ಸ್ವಿಚ್ ಆಫ್ ಮಾಡಿಕೊಂಡು ಫರಾ–ರಿಯಾಗಿದ್ದಾರೆ ಎಂದು ತಿಳಿದು ಬಂದಿದೆ.

ವಂಚಕರ ಬೈಕ್ ಸಂಖ್ಯೆ: ಎಂ 18 ಡಬ್ಲೂ 416 ಮತ್ತು ಕೆಎ66ಜೆ3945 ಹೀಗಿರುತ್ತದೆ. ಯಾರಾದರೂ ಈ ಬೈಕ್ ಸಂಖ್ಯೆ ಮತ್ತು ಅವರನ್ನು ಕಂಡರೆ ಯಾರು ಮೋಸ ಹೋಗದೆ ಕೂಡಲೇ ಹತ್ತಿರದ ಪೊಲೀಸ ಠಾಣೆಗೆ ಕರೆ ಮಾಡಬೇಕು ಎಂದು ಮೋಸ ಹೋದವರು ತಿಳಿಸಿದ್ದಾರೆ.

ಈ ಘಟನೆ ನಡೆದ ಮೇಲಾದರೂ ಇಂಡಿ ತಾಲೂಕಿನ ಜನತೆ ದುಡ್ಡಿಗೆ ಮೋಸ ಹೋಗದೆ. ತಮ್ಮ ಧಾಖಲೆಗಳನ್ನು ನೀಡದೆ ಜಾಗೃತಿಯಿಂದ ಇರಬೇಕು.

ಈ ಘಟನೆ ನಡೆದರೂ ಇಂಡಿ ಶಹಾರ ಪೋಲೀಸ್ ಠಾಣಾ. ಹಾಗು ಇಂಡಿ ಗ್ರಾಮೀಣ ಪೋಲಿಸ್ ಠಾಣಾ ಅಧಿಕಾರಿಗಳ ಗಮನಕೆ ಇದೆಯೋ ಅಥವಾ ಇಲ್ಲವೋ ಎನ್ನುವ ಪ್ರಶ್ನೆ ಇಂಡಿ ತಾಲೂಕಿನ ಸಾರ್ವಜನಿಕರದ್ದಾಗಿದೆ.

# ಮೋದಿ ದೂರದೃಷ್ಟಿಯಿಂದ ದೇಶ ಅಭಿವೃದ್ಧಿ :ಕಾಸುಗೌಡ

**ಉದಯರಶ್ಮಿ ನ್ಯೂಸ್**

ಇಂಡಿ: ಮೋದಿಯವರ ದೂರದೃಷ್ಟಿತ್ವ ದೇಶದ ಚಿತ್ರಣವನ್ನೇ ಬದಲಾಯಿಸಲಿದೆ. ಅವರು 10 ವರ್ಷಗಳಿಂದ ದೇಶದ ಅಭಿವೃದ್ಧಿಗಾಗಿ ನಿರಂತರ ಶ್ರಮಿಸಿದ್ದಾರೆ. ಹಾಗಾಗಿ ಮತ್ತೊಮ್ಮೆ ಮೋದಿಯವರನ್ನು ಪ್ರಧಾನಿಯಾಗಿಸಲು ಬಿಜೆಪಿ ಬೆಂಬಲಿಸಬೇಕೆಂದು ವಿಜಯಪುರ ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ಕಾಸುಗೌಡ ಬಿರಾದಾರ ಹೇಳಿದರು.

ಅವರು ತಾಲೂಕಿನ ಅಂಜುಟಗಿ ಗ್ರಾಮದಲ್ಲಿ ಬಿಜೆಪಿ ಅಭ್ಯರ್ಥಿ ಪರ ಚುನಾವಣೆ ಪ್ರಚಾರದಲ್ಲಿ ಮಾತನಾಡಿದರು.

ಅಭ್ಯರ್ಥಿ ರಮೇಶ ಜಿಗಜಿಣಗಿ ಮಾತನಾಡಿ, ವಿಜಯಪುರ ಜಿಲ್ಲೆಗೆ ಒಂದು ಲಕ್ಷ ಕೋಟಿ ರೂ ಅನುದಾನ ತಂದು ಕೆಲಸ ಮಾಡಿದ್ದೇನೆ. ರಾಷ್ಟ್ರೀಯ ಹೆದ್ದಾರಿ, ಕುಡಿಯುವ ನೀರಿನ ಪ್ರತಿ ಹಳ್ಳಿಗಳಿಗೆ ಜಲಜೀವನ ಮಿಷನ್,ಕೂಡ್ಲಗಿಯಲ್ಲಿ ಎನ್.ಟಿ.ಪಿ.ಸಿ ಸೇರಿದಂತೆ ಅನೇಕ ಕಾರ್ಯಗಳನ್ನು ಮಾಡಿದ್ದೇನೆ ಎಂದರು.

ವಿಪ ಮಾಜಿ ಸದಸ್ಯ ಅರುಣ ಶಹಾಪುರ ಮಾತನಾಡಿ, ಲೋಕಸಭಾ ಚುನಾವಣೆ ದೇಶದ ಭದ್ರತೆ, ದೇಶದ ಭವಿಷ್ಯ ನಿರ್ಧ–ರಿಸಲಿದೆ. ಮೋದಿಯವರು ತಮ್ಮ ಅವಧಿಯಲ್ಲಿ ಭ್ರಷ್ಟಾಚಾರ ರಹಿತ ಆಡಳಿತದ ಮೂಲಕ ಒಂದೇ ಒಂದು ಕಪ್ಪು ಚಿಕ್ಕೆ ಇಲ್ಲದಂತೆ ಆಡಳಿತ ಮಾಡಿದ್ದಾರೆ ಎಂದರು.



ಬಿಜೆಪಿ ಜಿಲ್ಲಾಧ್ಯಕ್ಷ ರಾಜಶೇಖರ ಕೂಚಬಾಳ ಮಾತನಾಡಿ, ಹಿಂದಿನ ಯುಪಿಎ ಹಗರಣದಲ್ಲಿ 2 ಜಿ ಹಗರಣ ಸೇರಿದಂತೆ ಅನೇಕ ಹಗರಣಗಳು ಬೆಳಕಿಗೆ ಬಂದವು. ಇಂದು ಕಾಂಗ್ರೆಸ್ ನಿಂದ ಎಲ್ಲ ಕಡೆ ಹಗರಣ ನಡೆಯುತ್ತಿವೆ ಎಂದರು.

ಅಶೋಕ ಅಲ್ಲಾಪುರ, ಇಂಡಿ ಮಂಡಲ ಪ್ರಧಾನ ಮಲ್ಲಿಕಾರ್ಜುನ ಕಿವಡೆ, ಹಣಮಂತರಾಯಗೌಡ ಬಿರಾದಾರ ಮಾತನಾಡಿದರು.

ವೇದಿಕೆಯು ಸಿದ್ದಲಿಂಗ ಹಂಜಗಿ, ಬಿ.ಎಸ್.ಪಾಟೀಲ ಹಿರೇಬೇನವೂರ,ರಾಜಕುಮಾರ ಸಗಾಯಿ, ಅನೀಲ ಜಮಾದಾರ, ಶೀಲವಂತ ಉಮರಾಣಿ, ರವಿ ವಗ್ಗೆ,ರಾಜಶೇಖರ ಯರಗಲ್ಲ, ರಾಘವೇಂದ್ರ ಕಾಪಸೆ ಮತ್ತಿತರಿದ್ದರು.

# ಜಿಗಜಿಣಗಿ ಗೆಲುವು ಖಚಿತ :ಬಿ.ಕೆ.ಕಲ್ಲೂರ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ಈ ಸಲ ಲೋಕಸಭಾ ಚುನಾವಣೆಯಲ್ಲಿ ವಿಜಯಪುರ ಲೋಕಸಭಾ ಎನ್.ಡಿ.ಎ ಮೈತ್ರಿ ಅಭ್ಯರ್ಥಿ ರಮೇಶ ಜಿಗಜಿಣಗಿ 1 ಲಕ್ಷ ಮತಗಳ ಅಂತರದಿಂದ ಗೆಲವು ಸಾಧಿಸಲಿದ್ದಾರೆ. ವಿಜಯಪುರ ಜಿಲ್ಲೆಯ ಅಭಿವೃದ್ಧಿಗೆ, ವಿಮಾನ ನಿಲ್ದಾಣ, ರಾಷ್ಟ್ರೀಯ ಹೆದ್ದಾರಿ, ರೈಲು ಮೇಲುಸೇತುವೆ, ಎನ್.ಟಿ.ಪಿ.ಸಿ ಹತ್ತು ಹಲುವಾರು ಕೆಲಸಗಳನ್ನು ಮಾಡಿದ್ದಾರೆ. ರಾಜ್ಯದಲ್ಲಿ ಜೆಡಿ–ಎಸ್ ಮೈತ್ರಿಯಿಂದ ಬಿಜೆಪಿಗೆ ಹೆಚ್ಚಿನ ಬಲ ಬಂದಿದೆ. ಜಿಲ್ಲೆಯಲ್ಲಿ ಎಲ್ಲ ಬಿಜೆಪಿ ಮತ್ತು ಜೆಡಿಎಸ್ ನಾಯಕರು ಒಗ್ಗಟ್ಟಾಗಿ ನರೇಂದ್ರ ಮೋದಿಜೀಯವರನ್ನು ಮತ್ತೊಮ್ಮೆ ಪ್ರಧಾನ ಮಂತ್ರಿಯನ್ನಾಗಿ ಮಾಡಲು ಶ್ರಮಿಸುತ್ತಿದ್ದಾರೆ. ದೇಶದ ಸರ್ವತೋಮುಖ ಅಭಿವೃದ್ಧಿಗಾಗಿ ಈ ಸಲ ನರೇಂದ್ರ ಮೋದಿ ಪ್ರದಾನ ಮಂತ್ರಿ ಆಗುವದು ಕೂಡ ನಿಶ್ಚಿತ. ದೇಶದಲ್ಲಿ ಎನ್.ಡಿ.ಎ ಮೈತ್ರಿಕೂಟ 400 ಕ್ಕಿಂತ ಹೆಚ್ಚು ಸ್ಥಾನದಲ್ಲಿ ಗೆಲುವು ಸಾಧಿಸಲಿದೆ ಎಂದು ಬಿಜೆಪಿ ನಿಕಟ ಪೂರ್ವ ಮಂಡಲ ಅಧ್ಯಕ್ಷ ಬಿ. ಕೆ. ಕಲ್ಲೂರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಟ್ಯಾಲೆಂಟ್ ಸರ್ಚ್ ಎಕ್ಸಾಮ್ 2024 ಇಂದು

**ಉದಯರಶ್ಮಿ ನ್ಯೂಸ್**

ತಾಳಿಕೋಟಿ: ಪಟ್ಟಣದ ಶ್ರೀ ಎಚ್.ಎಸ್. ಪಾಟೀಲ ಸ್ವತಂತ್ರ ಪದವಿ ಪೂರ್ವ ಮಹಾ ವಿದ್ಯಾಲಯ ಹಾಗೂ ಪ್ರಗ್ಯಾ ಐಐಟಿ ಮೆಡಿಕಲ್ ಅಕಾಡೆಮಿ ದಾವಣಗೆರೆ ಇವರ ಸಹಯೋಗದಲ್ಲಿ ಪಿಯುಸಿಯಲ್ಲಿ ಸೈನ್ಸ್ ಮಾಡಬೇಕೆನ್ನುವ ವಿದ್ಯಾರ್ಥಿಗಳಿಗಾಗಿ ಟ್ಯಾಲೆಂಟ್ ಸರ್ಚ್ ಎಕ್ಸಾಮ 2024 ಹಮ್ಮಿಕೊಳ್ಳಲಾಗಿದೆ. ಮುಂಜಾನೆ 10:30 ರಿಂದ 11:30 ರವರೆಗೆ ಶ್ರೀ ಎಚ್‌ಎಸ್ ಪಾಟೀಲ ಸ್ವತಂತ್ರ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ನಡೆಯಲಿರುವ ಈ ಪರೀಕ್ಷೆಯಲ್ಲಿ ಒಟ್ಟು 60 ಅಂಕಗಳಿದ್ದು ವಿಜ್ಞಾನ ಗಣಿತ ಹಾಗೂ ಇಂಗ್ಲೀಷ್ ವಿಷಯಗಳು ಇರುವವು. ಈ ಪರೀಕ್ಷೆಯಲ್ಲಿ ಶೇ. 55 ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಕಾಲೇಜ್ ಶುಲ್ಕದಲ್ಲಿ ಶೇ.100 ರಷ್ಟು ವಿನಾಯತಿ ನೀಡಲಾಗುವುದು.ಶೇ.50 ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಕಾಲೇಜ ಶುಲ್ಕದಲ್ಲಿ ಶೇ. 50 ವಿನಾಯಿತಿ ಇರುವುದು.ಶೇ.40 ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಶುಲ್ಕದಲ್ಲಿ ಶೇ. 20 ರಷ್ಟು ವಿನಾಯತಿ ನೀಡಲಾಗುವುದು. ಕೇವಲ 100 ವಿದ್ಯಾರ್ಥಿಗಳಿಗೆ ಮಾತ್ರ ಅವಕಾಶ ಇರುವುದು. ಆಸಕ್ತ ವಿದ್ಯಾರ್ಥಿಗಳು ಕಡ್ಡಾಯವಾಗಿ ತಮ್ಮ ಪೋಷಕರೊಂದಿಗೆ ಪರೀಕ್ಷೆಯಲ್ಲಿ ಭಾಗವಹಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಗುರು ಮಹಾಂತೇಶ್ವರಶ್ರೀ ಪ್ರಶಸ್ತಿ ಪ್ರಕಟ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ತಾಲೂಕಿನ ಮನಗೂಳಿ ಪಟ್ಟಣದ ಪಟ್ಟೇಕಂಥಿ ಹಿರೇಮಠವು 2024 ನೇ ಸಾಲಿನಿಂದ ಗುರು ಮಹಾಂತೇಶ್ವರ ಶ್ರೀ ಪ್ರಶಸ್ತಿ ನೀಡಲು ಆರಂಭಿಸಿದ್ದು. ಈ ಸಾಲಿನ ಪ್ರಶಸ್ತಿಯನ್ನು ಸಮಾಜ ಸೇವಕ, ಪ್ರಥ–'ಮ ದರ್ಜೆ ಗುತ್ತಿಗೆದಾರ ಎಸ್.ಎಸ್.ಆಲೂರು ಅವರಿಗೆ ಶ್ರೀಮಠವು ನೀಡಲು ನಿರ್ಧರಿಸಿದೆ.



ಮೇ.8 ರಂದು ಬೆಳಗ್ಗೆ 11 ಗಂಟೆಗೆ ಶ್ರೀಮಠದಲ್ಲಿ ಆಯೋಜನೆಗೊಂಡಿರುವ ಶ್ರೀಗುರುಮಹಾಂತೇಶ್ವರ 75 ನೇ ಯಾತ್ರಾಮಹೋತ್ಸವ, ಶ್ರೀಗುರು ಸಂಗನಬಸವ ಶಿವಾಚಾರ್ಯ ಸ್ವಾಮೀಜಿಯವರ 23 ನೇ ಸಂಸ್ಮರಣೋತ್ಸವ ಸಮಾರಂಭದಲ್ಲಿ ಶ್ರೀಮಠದ ಪಟ್ಟಾಧ್ಯಕ್ಷ ಡಾ.ಮಹಾಂತಲಿಂಗ ಶಿವಾಚಾರ್ಯ ಸ್ವಾಮೀಜಿ ನೇತೃತ್ವದಲ್ಲಿ ನಾಡಿನ ವಿವಿಧ ಮಠಾಧೀಶರರ ಸಾನಿಧ್ಯದಲ್ಲಿ, ವಿವಿಧ ಸಚಿವರ, ವಿವಿಧ ರಾಜಕೀಯ ಮುಖಂಡರ ಸಮ್ಮುಖದಲ್ಲಿ ಈ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಪ್ರಶಸ್ತಿಯು 11 ಸಾವಿರ ನಗದು, ಕಂಚಿನ ಪ್ರಶಸ್ತಿ ಪತ್ರ, ನೆನಪಿನ ಕಾಣಿಕೆ ಒಳಗೊಂಡಿದೆ. ಇದೇ ಸಂದರ್ಭದಲ್ಲಿ 10 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ 26 ಬಡ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ರೂ.2 ಸಾವಿರ ಮೌಲ್ಯದ ಬ್ಯಾಗ್, ನೋಟ್ಬುಸ್ತಕ ವಿವಿಧ ಪಠ್ಯಪರಿಕರಗಳನ್ನು ವಿದ್ಯಾರ್ಥಿ ವೇತನರೂಪದಲ್ಲಿ ಶ್ರೀಗಳು ನೀಡಲಿದ್ದಾರೆ ಎಂದು ಪಟ್ಟೇಕಂಥಿ ಹಿರೇಮಠದ ವ್ಯವಸ್ಥಾಪಕ ಬಸಯ್ಯ ಗಚ್ಚಿನಮಠ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಭವ್ಯ ಭಾರತ ನಿರ್ಮಾಣಕ್ಕೆ ಮುಂದಾಗಿ :ಕಾಪಸೆ

**ಉದಯರಶ್ಮಿ ನ್ಯೂಸ್**

ಝಳಕಿ: ಭವ್ಯ ಭಾರತ ನಿರ್ಮಾಣ ಮಾಡಲು ಯುವಕರು ರಾಷ್ಟ್ರೀಯತೆ ಬೇಳೆಸಿಕೊಳ್ಳಬೇಕು ಅದರ ಜೊತೆಗೆ ಸನಾತನ ಧರ್ಮ ಸಂಸ್ಕೃತಿ ಉಳಿವಿಗಾಗಿ ಮಠ ಮಾನ್ಯಗಳಿಗೆ ಗೌರವ ಕೊಡಬೇಕು ಎಂದು ಯುವ ಮುಖಂಡ ರಾಘವೇಂದ್ರ ಕಾಪಸೆ ಹೇಳಿದರು.



ಸಮೀಪದ ಗುಂದವಾನ ಗ್ರಾಮದಲ್ಲಿ ಶುಕ್ರವಾರ ನೂತನವಾಗಿ ನಿರ್ಮಿಸಿದ ಮಲ್ಲಿಕಾರ್ಜುನ ದೇವಸ್ಥಾನದ ಕಟ್ಟಡ ಉದ್ಘಾಟನೆ, ಪ್ರಾಣ ಪ್ರತಿಷ್ಠಾಪನೆ ಹಾಗೂ ಕಳಸಾರೋಹಣ ಮತ್ತು ಧರ್ಮ ಸಭೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಧರ್ಮದ ಮಾರ್ಗದಲ್ಲಿ ಸಾಗುವವರ ದಾರಿ ಸುಗಮವಾಗಿರುತ್ತದೆ. ಕಷ್ಟದಲ್ಲಿ ಎಲ್ಲರೂ ಕೈ ಬಿಟ್ಟರೂ ಧರ್ಮ ಎಂದಿಗೂ ಕೈ ಬಿಡುವುದಿಲ್ಲ. ಯುವಕರು ದುಶ್ಚಟಗಳಿಗೆ ಬಲಿಯಾಗಬಾರದು. ಆರೋಗ್ಯವೇ ನಿಜವಾದ ಭಾಗ್ಯವಾಗಿದೆ. ಸರಾಯಿ, ಗುಟಕಾ, ಬೀಡಿ ಇವೆಲ್ಲವುಗಳನ್ನು ಗ್ರಾಮದ ಹಿರಿಯರು ಹೊರಹಾಕಿಸಿ ಆರೋಗ್ಯದ ಅರಿವು ಮೂಡಿಸಬೇಕು ಎಂದರು.

ದಿವ್ಯ ಸಾನಿಧ್ಯ ಶ್ರೀಶೈಲ ಪೀಠದ ಜಗದ್ಗುರು ಡಾ.ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯರು ಭಗವತ್ಪಾಂಗಳ, ಅಭಿನವ ಮುರಘೇಂದ್ರ ಶಿವಾಚಾರ್ಯರು, ಗುರು ಗುರುಪಾದೇಶ್ವರ ಶಿವಾಚಾರ್ಯರು, ಅಭಿನವ ರಾಚೋಟೇಶ್ವರ ಶಿವಾಚಾರ್ಯರು, ಚಂದ್ರಶೇಖರ ಶಿವಾಚಾರ್ಯರು, ಮಲ್ಲಿಕಾರ್ಜುನ ಶಿವಾಚಾರ್ಯರು, ಡಾ.ಸಿದ್ಧಲಿಂಗ ಶಿವಾಚಾರ್ಯರು, ಮಡಿವಾಳಯ್ಯ ಶಾಸ್ತ್ರಿಗಳು, ಮಹಾಂತೇಶ ಹಿರೇಮಠ ಸ್ವಾಮೀಜಿ ಸೇರಿದಂತೆ ಅನೇಕ ಗಣ್ಯರು ಗ್ರಾಮಸ್ಥರು ಇದ್ದರು.

# ಊಟದ ಮನೆ

## ಭಾವರಶ್ಮಿ




**– ಮಂಜು ಅತ್ರೇಯ**

(“ನಮ್ಮ ಕಥಾ ಅರಮನೆ” ಬರಹಗಾರರು)

**ಉದಯರಶ್ಮಿ ದಿನಪತ್ರಿಕೆ**

ವೆಂಕಜ್ಜಿಗೆ ಊಟದ ಮನೆ ಅಂದರೆ ಬಹಳ ಖುಷಿ...ಪಾಪದ ವೆಂಕಜ್ಜಿ, ಯಾರ ಮನೆಯಲ್ಲಿ ವಿಶೇಷ ಎಂದು ನೋಡುತ್ತಿರುತ್ತಾಳೆ. ಆ ಊರಿನ ಮನೆಯವರಿಗೆಲ್ಲಾ ಗೊತ್ತು ವೆಂಕಜ್ಜಿಗೆ ಒಂದು ಎಲೆ ಇಡಬೇಕು ಎಂದು. ಆ ದಿನ ಮೂಲೆ ಮನೆ ಸುಬ್ಬುನ ಮನೆಯಲ್ಲಿ ಸತ್ಯನಾರಾಯಣಪೂಜೆ.... ಮನೆಯವರೇ ಒಂದು ಹದಿನೈದು ಜನ ಇರುವುದರಿಂದ ನೆಂಟರನ್ನು ಬಿಟ್ಟರೆ ಊರಿನವರನ್ನು ಊಟಕ್ಕೆ ಕರೆದಿರಲಿಲ್ಲ... ವೆಂಕಜ್ಜಿಗೆ ಹೇಗೋ ಗೊತ್ತಾಗಿ ತಾನು ಆ ಮನೆಗೆ ಊಟಕ್ಕೆ ಹೋಗಬೇಕೆಂದು ಬೇಗ ಮನೆ ಕೆಲಸ ಮುಗಿಸಿ ಇದ್ದುದ್ದರಲ್ಲಿ ಇದ್ದ ಶುಭ್ರವಾದ ಸೀರೆ ಉಟ್ಟು ಹೊರಟೇ ಬಿಟ್ಟರು.... ಹೊರಟು ನಿಂತ ಅಮ್ಮನನ್ನು ನೋಡಿದ ಮಗ ಕೃಷ್ಣ ನೋಡಿಲ್ಲ ಅನ್ನುವ ಹಾಗೆ ನಿಂತಿದ್ದ....ತಾಳ್ಮೆ ಅವನನ್ನು ಮಾನಸಿಕವಾಗಿ ಗಟ್ಟಿ ಮಾಡಿತ್ತು..... ಮೌನ ಅವನನ್ನು ಮುಂದಿನ ಗಲಾಟೆ ಮಾಡದಂತೆ ತಡೆದಿತ್ತು. ಅವನಿಗೆ ಈ ಅಮ್ಮನ ಚಾಳಿ ಇಷ್ಟವಾಗುತ್ತಿರಲಿಲ್ಲ... ಹಾಗಂತ ಹೇಳಿದರೆ ದೊಡ್ಡ ಗಲಾಟೆಯಾಗುತ್ತೆ ಮನೆಯಲ್ಲಿ .......ಅಮ್ಮನ ಈ ಬಾಯಿ ರುಚಿ ಅವನಿಗೆ ತುಂಬಾ ಸಂಕಟ ತಂದಿದೆ.....ನಾಲ್ಕು ಜನರ ಮುಂದೆ ಮಾನ ಹೋಗಿದ್ದೂ ಇದೆ... ಇವತ್ತು ಸುಬ್ಬುನ ಮನೆಯಲ್ಲಿ ಮನೆ ಮಟ್ಟಿಗೆ ಔತಣ ಮಾಡುತ್ತಾರೆ ಎಂದು ಎಲ್ಲರಿಗೂ ತಿಳಿದ ವಿಷಯ... ಆದರೆ ಈ ಅಮ್ಮನಿಗೆ ಯಾರ ಬುದ್ಧಿವಾದವೂ ಹಿಡಿಸುವುದಿಲ್ಲ.

ಕೃಷ್ಣ ನೋಡುತ್ತಿದ್ದಂತೆ ಆ ಮನೆ.. ಈ ಮನೆ ಎಂದು ಎಲ್ಲಾ ಹೆಂಗಸರು ರಸ್ತೆಗೆ ಬಂದು ವೆಂಕಜ್ಜಿ, ಊಟದ ಮನೆಗೆ ಹೊರಟಿದ್ದೀರಾ?...ಹೂಂ... ಸುಬ್ಬು ಕರೆದಿದ್ದಾನೆ ಎಂದು ಗತ್ತಿನಿಂದ ಹೇಳಿ ಹೋಗುತ್ತಿರುವ



ತಾಯಿಯನ್ನು ಅಸಹಾಯಕನಾಗಿ ನೋಡುತ್ತಿದ್ದ ಕೃಷ್ಣ...ಎಲ್ಲಾ ಹೆಂಗಸರೂ ಟಹೂಂ.. ಕರೆದಿದ್ದಾನೆ ಈ ಅಜ್ಜಿಯನ್ನು ಮಾತ್ರ ಎಂದು ಆಡಿಕೊಂಡು ನಗುವುದು ನೋಡಿ ಕೃಷ್ಣನಿಗೆ ಬೇಜಾರಾಗಿ ಮನೆ ಒಳಗೆ ಹೋಗುತ್ತಾನೆ.

ಸುಬ್ಬುನ ಮನೆಗೆ ಬಂದ ವೆಂಕಜ್ಜಿಗೆ ಒಳ್ಳೆಯ ಸ್ವಾಗತ ಇಲ್ಲವೇ ಇಲ್ಲ... ಎಲ್ಲರ ಕುಹಕ ನೋಟ ಅವರ ಮೇಲಿತ್ತು.. ಸುಬ್ಬುನ ಅಮ್ಮನಿಗಂತೂ ಈ ವೆಂಕಜ್ಜಿ ಬಂದದ್ದು ಇಷ್ಟವಾಗಲಿಲ್ಲ.. ಊಟ ಆಗಲಿ ಊಟ ಮಾಡಿದ್ದಕ್ಕೆ ಅಡುಗೆಯ ಪಾತ್ರಗಳನ್ನು ತೊಳೆದು ಹೋಗಲು ಹೇಳುವೆ ಎಂದು ತನ್ನ ಸೊಸೆಯ ಹತ್ತಿರ ಹೇಳಿದ್ದು ವೆಂಕಜ್ಜಿಗೆ ಕೇಳಿಸಲಿಲ್ಲ...ಯಾರ ಮೇಲೂ ಅವರ ಗಮನವಿಲ್ಲ..... ಮಂಗಳಾರತಿ ಎಷ್ಟು ಹೊತ್ತಿಗೆ... ತೀರ್ಥ ಪ್ರಸಾದ ಯಾವಾಗ ಕೊಡುತ್ತಾರೆ.. ಊಟ ಯಾವಾಗ ಹಾಕುತ್ತಾರೆ ಎನ್ನುವುದೇ ಅವರ ಯೋಚನೆ... ಮಂಗಳಾರತಿ ಆಯಿತು..

ಪ್ರಸಾದ ವಿತರಣೆ ಆದ ಮೇಲೆ ಊಟದ ಗಡಿಬಿಡಿ... ಆಗಲೇ ವೆಂಕಜ್ಜಿ ಒಂದು ಮೂಲೆ ಸ್ಥಳದಲ್ಲಿ ಎಲೆ ಹಾಕುತ್ತಾರೆ ಎಂದು ಕೂತಿ–ದ್ದರು... ಮನೆಯ ಯಜಮಾನ ಸುಬ್ಬು ಅವರು ಅಲ್ಲಿ ಕೂತಿದ್ದು ನೋಡಿ ಅಜ್ಜಿ, ಈ ಕಡೆ ಎಲೆ ಹಾಕುವೆ ಬಂದು ಕುಳಿತುಕೊಳ್ಳಿ ಎಂದ...ಅವನ ಅಮ್ಮ, ಬಿಡು ಎರಡನೇ ಪಂಕ್ತಿ ಯಲ್ಲಿ ಕೂಡುತ್ತಾರೆ ಎಂದು ಎಲ್ಲರನ್ನೂ ಊಟಕ್ಕೆ ಎಬ್ಬಿಸಿ ದರು. ಇವರಿಗೆ ಮಾತ್ರ ಎಲೆ ಇಲ್ಲ... ಇರಲಿ ಮುಂದಿನ ಪಂಕ್ತಿಗೆ ಕೂತರಾಯಿತು ಎಂದು ಅಜ್ಜಿ ಹೆಬ್ಬಾಗಿಲಿಗೆ ಬಂದು ಕೂತರು...ಇನ್ನೇನು ಸಿಹಿ ಬಡಿಸಬೇಕು ಎಲ್ಲಿಂದಲೋ ಬಂದ ಮಳೆ ಧಾರಾಕಾರವಾಗಿ ಸುರಿಯ ತೊಡಗಿತು. ಮನೆ ತೀರ ಸಣ್ಣದಿರುವುದರಿಂದ ಅಂಗಳದಲ್ಲಿ ಊಟ ಹಾಕುವ ವ್ಯವಸ್ಥೆ ಮಾಡಿದ್ದರು. ಬೇಸಿಗೆಯಲ್ಲಿ ತಂಪು ಆಗಲಿ, ಬಿಸಿಲಿನ ಝಳ ಕಮ್ಮಿಯಾಗಲಿ ಎಂದು ಅಂಗಳ ಪೂರ್ತಿ ಹಾಕಿದ್ದ ತೆಂಗಿನ ಗ–ರಿಯ ಚಪ್ಪರ... ಮಧ್ಯ ತೂತಿನಲ್ಲಿ ಆಗಾಗ ಸೂರ್ಯ ಇಣುಕಿ ನೋಡುತ್ತಿದ್ದ.......ಈಗ ನೋಡಿದರೆ ಜೋರಾದ ಮಳೆ ಆ ತೂತನ್ನು ಇನ್ನೂ ಅಗಲ ಮಾಡಿಕೊಂಡು ಸುರಿಯತೊಡಗಿತು... ಊಟಕ್ಕೆ ಕೂತವರ ಎಲೆಯ ಜೊತೆ ಆಡಲು ಶುರುವಾಯಿತು... ಎಲ್ಲರೂ ಎಲೆ ಬಿಟ್ಟು ಎದ್ದು ಹೋಗಬೇಕಾಯಿತು.. ಮತ್ತೆ ಊಟಕ್ಕೆ ಕುಳಿತುಕೊಳ್ಳಲು ನಾಚಿಕೆಯಾಗಿ ಬಂದ ನೆಂಟರೆಲ್ಲಾ ಪ್ರಸಾದ ಕಟ್ಟಿಸಿಕೊಂಡು ಹೊರಟ–ರು... ಮನೆಯ ಯಜಮಾನ ಸುಬ್ಬು ವೆಂಕಜ್ಜಿಯನ್ನು ಒಳಗೆ ಕರೆದು ಎಲೆ ಹಾಕಿ ಅಡುಗೆ ಭಟ್ಟರಿಗೆ ಬಳಸಲು ಹೇಳಿದ... ಖುಷಿಯಿಂದ ಸಿಹಿ ಉಂಡ ಅಜ್ಜಿ ಸುಬ್ಬುವನ್ನು ಹರಸಿ... ತೃಪ್ತಿಯಿಂದ ಮನೆಯ ಕಡಗೆ ಹೊರಟಳು.... ಹಸಿದು ಬಂದ ವೆಂಕಜ್ಜಿಗೆ ಮೊದಲು ಊಟ ಹಾಕಿದ್ದರೆ ಈ ಅವಘಡ ಆಗುತ್ತಿರಲಿಲ್ಲ ಎಂದು ಸುಬ್ಬುಗೆ ಅನಿಸಿತು.

# ಅನ್ಯೋನ್ಯತೆ

**ಉದಯರಶ್ಮಿ ದಿನಪತ್ರಿಕೆ**

## ಕಾವ್ಯರಶ್ಮಿ

**– ಕಲಾವತಿ ಪ್ರಕಾಶ್, ಬೆಂಗಳೂರು**


(“ನಮ್ಮ ಕಥಾ ಅರಮನೆ” ಬರಹಗಾರರು)

ರಾಜ್ಯ ಪದವಿಯ ಬಿಟ್ಟು ನಾರು ಮಡಿಯನು ಉಟ್ಟು
ವ್ಯಾಜ್ಯವಾಡದೆ ರಾಮ ಪಾಲಕರಾಜ್ಞೆಗೆ ಇಂಬು ಕೊಟ್ಟು
ಜಾನಕಿ ಹೊರಟಳು ಪತಿಯ ಹೆಜ್ಜೆಯೊಡನ್ಹೆಜ್ಜೆಯಿಟ್ಟು
ಸೀತಾರಾಮರು ತೆರಳಿದರು ಅರಮನೆಯ ಆಸೆ ಬಿಟ್ಟು

ಅಯೋಧ್ಯಆಳುವ ಕೈ ವೈದೇಹಿಯ ಕೇಶ ಸಿಂಗರಿಸುತ
ರಾಣಿವಾಸದ ವೇಷಭೂಷ ಎಲೆ ಹೂವಲ್ಲೇ ನೇಯುತ
ಏಸೋ ಜನುಮಕೂ ಬಾಡದ ಹೂವ ಮುಡಿಸೋ ಹಿತ
ಕೇಶದಲಿ ಬೆರಳಾಡಿಸಿದುದನು ಮರೆಯಲುಂಟೇ ಸೀತ

ತಾವರೆಯ ಮೊಗದವಳು ಸಂಪಿಗೆಯ ಮೂಗವಳು
ತನ್ಮಯದಿ ತನ್ನಿನಿಯನ ಪ್ರತಿ ಸ್ಪರ್ಶವನೂ ಸವಿತಿಹಳು
ಜಿಂಕೆಯೊಂದು ಕಂಡಿತು ಸಿತಾ ರಾಮರ ಅನ್ಯೋನ್ಯತೆ
ತದೇಕದಿ ಗಮನಿಸಿತು ಹರಿಣಿ ರಾಮನ ಪ್ರೀತಿಯೊರತೆ

ಆಯಾಸಗೊಂಡ ಅಡಿದಾವರೆ ಹಿಡಿದು ತಾ ಕೈಯಲ್ಲಿ
ಮೃದುವಾಗಿ ಮುದದಿಂದ ಹದವಾದ ನದಿ ನೀರಲಿ
ವಿರಮಿಸು ಪ್ರಿಯೆ ಎಂದು ಸಸ್ಯೆ ಸಂಜೀವಿನಿ ತೀಡಿದನು
ಸರಸದ ನುಡಿಯಾಡುತ ಒರೆಸಿದ ಪಾದ ಶ್ರೀರಾಮನು




**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR